# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 82 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 06–10–2023 ಶುಕ್ರವಾರ | ಪುಟ: 4 | ಬೆಲೆ : ರೂ.2–00
Volume - 01 Issue - 82 | Title- Code: KARKAN 28269 | Chitradurga | Date: 06-10-2023 Friday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ದುರ್ಗಕ್ಕೆ ಸಿಎಂ; ಕವಾಡಿಗರಹಟ್ಟಿಗೆ ಭೇಟಿ ನೀಡುವಂತೆ ಕರುನಾಡ ವಿಜಯಸೇನೆ ಆಗ್ರಹ **2**

ಮದ್ಯ, ಮಾದಕ ವ್ಯಸನವೂ ಆತ್ಮಹತ್ಯೆಗೆ ಪ್ರೇರಣೆ: ಡಾ.ಜಿ.ಓ.ನಾಗರಾಜ್ **3**

12 ಜಿಲ್ಲೆಗಳಲ್ಲಿ ಬರಪೀಡಿತ ಪ್ರದೇಶಗಳಿಗೆ ಕೇಂದ್ರ ಬರ ತಂಡ **4**



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಮುಖ್ಯಮಂತ್ರಿಗಳ ಪ್ರವಾಸ ಕಾರ್ಯಕ್ರಮ

» **ಚಿತ್ರದುರ್ಗ**

ರಾಜ್ಯದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಅ. 06 ರಂದು ಚಿತ್ರದುರ್ಗ ಜಿಲ್ಲಾ ಪ್ರವಾಸ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ. ಮುಖ್ಯಮಂತ್ರಿಗಳು ಅಂದು ಬೆಳಿಗ್ಗೆ ಬೆಂಗಳೂರಿನಿಂದ ಹೆಲಿಕಾಪ್ಟರ್ ಮೂಲಕ ಹೊರಟು, ಬೆಳಿಗ್ಗೆ 11 ಗಂಟೆಗೆ ಚಿತ್ರದುರ್ಗದ ಮುರುಘಾಮಠ ಆವರಣದಲ್ಲಿನ ಹೆಲಿಪ್ಯಾಡ್‍ಗೆ ಆಗಮಿಸುವರು. ನಂತರ ಇಲ್ಲಿನ ಸ್ಥಳೀಯ ಕಾರ್ಯಕ್ರಮವೊಂದರಲ್ಲಿ ಭಾಗವಹಿಸಿ, ಬೆ. 11.30 ಗಂಟೆಗೆ ಹೆಲಿಕಾಪ್ಟರ್ ಮೂಲಕ ಹಿರಿಯೂರಿನ ತಾಲ್ಲೂಕು ಕ್ರೀಡಾಂಗಣದಲ್ಲಿನ ಹೆಲಿಪ್ಯಾಡ್‍ಗೆ ಆಗಮಿಸುವರು, ಮಧ್ಯಾಹ್ನ 12.10 ಗಂಟೆಗೆ ಹಿರಿಯೂರು ತಾಲ್ಲೂಕು ಬಬ್ಬೂರು ಫಾರಂ ಗೆ ತೆರಳಿ ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಇವರ ವತಿಯಿಂದ ಆಯೋಜಿಸಿರುವ ವಲಯ ಕೃಷಿ ಮತ್ತು ತೋಟಗಾರಿಕೆ ಸಂಶೋಧನಾ ಕೇಂದ್ರದ ಶತಮಾನೋತ್ಸವ ಸಮಾರಂಭದಲ್ಲಿ ಭಾಗವಹಿಸುವರು. ಮಧ್ಯಾಹ್ನ 2.40 ಗಂಟೆಗೆ ಹಿರಿಯೂರಿಗೆ ತೆರಳಿ, ಕರ್ನಾಟಕ ಪ್ರದೇಶ ಕುರುಬರ ಸಂಘದ ವತಿಯಿಂದ ಆಯೋಜಿಸಿರುವ "ಕನಕ ಸಮುದಾಯ ಭವನ" ಕಟ್ಟಡಕ್ಕೆ ಗುದ್ದಲಿ ಪೂಜೆ ನೆರವೇರಿಸುವರು. ಮಧ್ಯಾಹ್ನ 3.10 ಗಂಟೆಗೆ ಹಿರಿಯೂರಿನಿಂದ ಹೆಲಿಕಾಪ್ಟರ್ ಮೂಲಕ ಬೆಂಗಳೂರಿಗೆ ಪ್ರಯಾಣ ಬೆಳೆಸುವರು ಎಂದು ಮುಖ್ಯಮಂತ್ರಿಗಳ ವಿಶೇಷ ಕರ್ತವ್ಯಾಧಿಕಾರಿ ತಿಳಿಸಿದ್ದಾರೆ.

### ನಾಗಪುರ ದೀಕ್ಷಾ ಭೂಮಿ ಭೇಟಿ: ಅರ್ಜಿ ಆಹ್ವಾನ

» **ಚಿತ್ರದುರ್ಗ**

ಸಮಾಜ ಕಲ್ಯಾಣ ಇಲಾಖೆ ವತಿಯಿಂದ 2023–24ನೇ ಸಾಲಿನಲ್ಲಿ ಮಹಾರಾಷ್ಟ್ರದ ನಾಗಪುರದಲ್ಲಿನ ದೀಕ್ಷಾ ಭೂಮಿಗೆ ಭೇಟಿ ನೀಡುವ ಯಾತ್ರಾರ್ಥಿಗಳಿಗೆ ಬಸ್ಸುಗಳ ವ್ಯವಸ್ಥೆ ಕಲ್ಪಿಸಲಾಗುತ್ತಿದ್ದು, ದೀಕ್ಷಾ ಭೂಮಿಗೆ ಭೇಟಿ ನೀಡುವ ಯಾತ್ರಾರ್ಥಿಗಳು ಸಮಾಜ ಕಲ್ಯಾಣ ಇಲಾಖೆಯ ವೆಬ್‍ಸೈಟ್ ತಿತಿತಿ. ತಿ.ಇಾಚಿಡಿ.ಟಿiಛಿ.iಟಿ ನಲ್ಲಿ ಆನ್‍ಲೈನ್ ಮೂಲಕ ಅಕ್ಟೋಬರ್ 10 ರ ಒಳಗೆ ಅರ್ಜಿ ಸಲ್ಲಿಸಬಹುದು ಎಂದು ಹೊಸದುರ್ಗ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗ್ರಾಮೀಣ ಜನರ ಸಮಸ್ಯೆಗಳಿಗೆ ಅಧಿಕಾರಿಗಳು ಕೂಡಲೇ ಸ್ಪಂದಿಸಿ

## ಜನಸ್ಪಂದನಾ ಕಾರ್ಯಕ್ರಮದಲ್ಲಿ ಶಾಸಕ ಟಿ.ರಘುಮೂರ್ತಿ ಸೂಚನೆ



» **ಚಳ್ಳಕೆರೆ**

ಸರ್ಕಾರ ಮತ್ತು ಸಾರ್ವಜನಿಕರ ನಡುವೆ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗ ಸ್ನೇಹ ಜೀವಿಗಳಾಗಿ ಕಾರ್ಯನಿರ್ವಹಿಸಬೇಕು. ಸಮಸ್ಯೆಗಳನ್ನು ಹೊತ್ತುತರುವ ಸಾರ್ವಜನಿಕರಿಗೆ ಸೂಕ್ತ ಮಾರ್ಗದರ್ಶನ ನೀಡಬೇಕು. ಸಮಸ್ಯೆಗಳ ಪರಿಹಾರವನ್ನು ಕಂಡುಕೊಳ್ಳುವಲ್ಲಿ ಅಧಿಕಾರಿ ವರ್ಗ ಜಾಗೃತೆ ವಹಿಸಬೇಕೆಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ಸಾಣೀಕೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಜನಸಂಪರ್ಕ ಸಭೆಯನ್ನು ಉದ್ಘಾಟಿಸಿ ಸಾರ್ವಜನಿಕರ ಸಮಸ್ಯೆಗಳನ್ನು ಆಲಿಸಿ, ಅಧ್ಯಕ್ಷತೆ ವಹಿಸಿ ಮಾತನಾಡಿದರು. ಈಗಾಗಲೇ ಮೂರನೇ ಬಾರಿಗೆ ಶಾಸಕನಾದಮೇಲೆ ಕೇವಲ ನಾಲ್ಕು ತಿಂಗಳ ಅವಧಿಯಲ್ಲಿ ಬಹುತೇಕ ಎಲ್ಲಾ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಜನಸಂಪರ್ಕ ಸಭೆಯನ್ನು ನಡೆಸಿ ಪರಿಹಾರವನ್ನು ರೂಪಿಸಲಾಗಿದೆ. ಕೆಲವು ಸಂದರ್ಭಗಳಲ್ಲಿ ಮಾತ್ರ ಸರ್ಕಾರ ಮಟ್ಟದಲ್ಲಿ ಆಗಬೇಕಾದ ಕೆಲಸ ಕಾರ್ಯಗಳಿಗೆ ವಿಳಂಬವಾಗುತ್ತದೆ. ಅದನ್ನು ಹೊರತು ಪಡಿಸಿ ಸ್ಥಳೀಯವಾಗಿ ಬಗೆಹರಿಯಬಹುದಾದ ಸಮಸ್ಯೆಗಳಿಗೆ ಅಧಿಕಾರಿಗಳು ಸೂಕ್ತ ಉತ್ತರ ನೀಡಲು ಉತ್ಸಾಹ ತೋರುತ್ತಿಲ್ಲ. ಇದರಿಂದ ಸಾರ್ವಜನಿಕರಿಗೆ ಸರ್ಕಾರದ ಮೇಲೆ ವಿಶ್ವಾಸ ಮೂಡಲು ಸಾಧ್ಯವಾಗುತ್ತಿಲ್ಲ. ಜನರ ಸಮಸ್ಯೆಗಳಿಗೆ ಉತ್ತರಗಳು ನಿಮ್ಮಲ್ಲೇ ಇರುತ್ತವೆ ಅವುಗಳನ್ನು ನಿಯಮಬದ್ಧವಾಗಿ ಜಾರಿಗೊಳಿಸುವಲ್ಲಿ ಜನರು



ಸಹಕಾರ ಪಡೆಯಬೇಕು. ಸರ್ಕಾರದ ಮೇಲೆ ಬೊಟ್ಟು ತೋರಿಸುವ ಕಾರ್ಯವನ್ನು ಯಾರೂ ಮಾಡಬಾರದು ಎಂದರು.

ಇದೇ ಸಂದರ್ಭದಲ್ಲಿ ಸಾರ್ವಜನಿಕರು ನಿವೇಶನ, ಕುಡಿಯುವ ನೀರು, ಮನೆ, ಹಕ್ಕುಪತ್ರ ವಿತರಣೆ, ಬೆಸ್ಕಾಂ ಸಮಸ್ಯೆ, ಗೃಹಲಕ್ಷ್ಮಿ, ಅನ್ನಭಾಗ್ಯ ಯೋಜನೆ ಹಣ ವಿಳಂಬ ಮುಂತಾದ ಸಮಸ್ಯೆಗಳ ಬಗ್ಗೆ ಶಾಸಕರ ಗಮನ ಸೆಳೆದರು. ಅಂಗನವಾಡಿ ಕಾರ್ಯಕರ್ತೆಯೊಬ್ಬರು ಗ್ರಾಮ ಪಂಚಾಯಿತಿ ಈ ಹಿಂದೆ 2009ರಲ್ಲಿ ನೀಡಿದ ನಿವೇಶನವನ್ನು ಬೇರೆಯವರು ಆಕ್ರಮಿಸಿಕೊಂಡಿದ್ದು ಅದನ್ನು ಮರಳಿ ಕೊಡಿಸುವಂತೆ ಮನವಿ ಮಾಡಿದರು. ಇದೇ ಸಂದರ್ಭದಲ್ಲಿ ಗ್ರಾಮದ ಮಹಿಳೆಯೊಬ್ಬರು ಪದೇ, ಪದೆ ಪೊಲೀಸ್ ಠಾಣೆಗೆ ದೂರು ನೀಡುವ ಬಗ್ಗೆ ಮಹಿಳೆಯರು ಆರೋಪಿಸಿದಾಗ ಸಭೆಯಲ್ಲಿದ್ದ ಚಳ್ಳಕೆರೆ ಠಾಣಾ ಇನ್ಸ್‍ಪೆಕ್ಟರ್ ರಾಜಫಕೃದ್ದೀನ್ ದೇಸಾಯಿಗೆ ಶಾಸಕರು ಸೂಚನೆ ನೀಡಿದರು. ಗ್ರಾಮೀಣ ಭಾಗಗಳಲ್ಲಿ ಉದ್ಭವವಾಗುವ ಸಣ್ಣಪುಟ್ಟ ಸಮಸ್ಯೆಗಳ ನಿವಾರಣೆಗೆ ಕಂದಾಯ ಇಲಾಖೆ,ತಾಲ್ಲೂಕು ಪಂಚಾಯಿತಿ, ಕೃಷಿ ತೋಟಗಾರಿಕೆ ಇಲಾಖೆ ಅಧಿಕಾರಿಗಳು ಹೆಚ್ಚು ಶ್ರಮಿಸಬೇಕು ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ತಹಶೀಲ್ದಾರ್ ರೇಹಾನ್ ಪಾಷ, ಶಾಸಕರ ಅಧ್ಯಕ್ಷತೆಯಲ್ಲಿ ಜನಸ್ಪಂದನಾ ಕಾರ್ಯಕ್ರಮದ ಮೂಲಕ ತಾಲ್ಲೂಕು ಆಡಳಿತ ಸಾರ್ವಜನಿಕ ಹಲವಾರು ಸಮಸ್ಯೆಗಳ ನಿವಾರಣೆಗೆ ಪ್ರಾಮಾಣಿಕ ಪ್ರಯತ್ನ ನಡೆಸಿದೆ. ಸಾಣೀಕೆರೆ ಗ್ರಾಮದಲ್ಲಿ ನಿವೇಶನ ರಹಿತರಿಗೆ ನಿವೇಶನ ನೀಡಲು 162 ನಿವೇಶನಗಳನ್ನು ಗುರುತಿಸಲಾಗಿದೆ. ಸಾಮಾಜಿಕ ಭದ್ರತಾ ಯೋಜನೆಯಡಿಯಲ್ಲಿ ಫಲಾನುಭವಿಗಳಿಗೆ ಸರ್ಕಾರದಿಂದ ಬಂದ ಹಣವನ್ನು ಸಕಾಲದಲ್ಲಿ ತಲುಪಿಸುವ ವ್ಯವಸ್ಥೆಯಾಗುತ್ತಿದೆ ಎಂದರು.

ಗ್ರಾಮ ಪಂಚಾಯಿತಿ ಅಧ್ಯಕ್ಷ ನಾಗರಾಜು, ಉಪಾಧ್ಯಕ್ಷೆ ಶಶಿಕಲಾ, ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ಎಚ್.ಆಂಜನೇಯ, ಗ್ರಾಮದ ಮುಖಂಡರಾದ ಸಾಣೀಕೆರೆಮಂಜು, ಎನ್. ಮಂಜುನಾಥ, ವೀರಣ್ಣ, ತಿಪ್ಪೇರುದ್ರಪ್ಪ, ಮಹಲಿಂಗಪ್ಪ, ಬೆಸ್ಕಾಂ ಎಇಇ ರಾಜು, ಕೃಷಿ ಅಧಿಕಾರಿ ಅಶೋಕ್, ತೋಟಗಾರಿಕೆ ಅಧಿಕಾರಿ ವಿರೂಪಾಕ್ಷಪ್ಪ, ಕಾರ್ಮಿಕ ಅಧಿಕಾರಿ ಕುಸುಮಾ, ಪಶುವೈದ್ಯಾಧಿಕಾರಿ ಡಾ.ರೇವಣ್ಣ, ಬಿಇಒ ಕೆ.ಎಸ್.ಸುರೇಶ್, ಎಇಒ ಸಂತೋಷ್, ವೈದ್ಯಾಧಿಕಾರಿ ಡಾ.ನಾಗರಾಜು, ಅಕ್ಷರ ದಾಸೋಹ ಅಧಿಕಾರಿ ತಿಪ್ಪೇಸ್ವಾಮಿ, ಸಿಆರ್‌ಪಿ ಗಿರೀಶ್, ಕಂದಾಯಾಧಿಕಾರಿ ಲಿಂಗೇಗೌಡ, ಗ್ರಾಮಲೆಕ್ಕಾಧಿಕಾರಿ ಕೇಶವಚಾರ್, ಪಿಡಿಒ ದೇವರಾಜ ಮುಂತಾದವರು ಉಪಸ್ಥಿತರಿದ್ದರು.

# ದುರ್ಗಕ್ಕೆ ಸಿಎಂ

## ಇಂದು ಬಬ್ಬೂರು ಫಾರಂ ಶತಮಾನೋತ್ಸವ

### ಸಿದ್ದರಾಮಯ್ಯಅವರಿಂದ ಸಿರಿಧಾನ್ಯ ಮೇಳ, ತೋಟಗಾರಿಕೆ ಬೆಳೆ ವಿಚಾರಸಂಕಿರಣ ಉದ್ಘಾಟನೆ

» **ಚಿತ್ರದುರ್ಗ**

ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಇವರ ವತಿಯಿಂದ ವಲಯ ಕೃಷಿ ಮತ್ತು ತೋಟಗಾರಿಕೆ ಸಂಶೋಧನಾ ಕೇಂದ್ರದ ಶತಮಾನೋತ್ಸವ ಸಮಾರಂಭ ಹಾಗೂ ಸಿರಿಧಾನ್ಯ ಮೇಳ ಮತ್ತು ತೋಟಗಾರಿಕೆ ಬೆಳೆಗಳ ವಿಚಾರಸಂಕಿರಣದ ಉದ್ಘಾಟನಾ ಕಾರ್ಯಕ್ರಮ ಅ. 06 ರಂದು ಬೆಳಿಗ್ಗೆ 10 ಗಂಟೆಗೆ ಹಿರಿಯೂರು ತಾಲ್ಲೂಕು ಬಬ್ಬೂರು ಫಾರಂ ಆವರಣದಲ್ಲಿ ಆಯೋಜಿಸಲಾಗಿದೆ.



ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಕಾರ್ಯಕ್ರಮದ ಉದ್ಘಾಟನೆ ನೆರವೇರಿಸುವರು. ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಖಾತೆ ರಾಜ್ಯ ಸಚಿವರು ಹಾಗೂ ಸಂಸದರಾದ ಎ. ನಾರಾಯಣಸ್ವಾಮಿ ಅವರು ಕೃಷಿ ಪ್ರಕಟಣೆಗಳನ್ನು ಬಿಡುಗಡೆ ಮಾಡುವರು. ಯೋಜನೆ ಮತ್ತು ಸಾಂಖ್ಯಿಕ ಸಚಿವರು ಮತ್ತು ಜಿಲ್ಲಾ ಉಸ್ತುವಾರಿ ಸಚಿವರಾದ ಡಿ. ಸುಧಾಕರ್ ಅವರು ಸಮಾರಂಭದ ಅಧ್ಯಕ್ಷತೆ ವಹಿಸುವರು. ಕೃಷಿ ಸಚಿವ ಎನ್. ಚೆಲುವರಾಯಸ್ವಾಮಿ ಸ್ಮರಣ ಸಂಚಿಕೆ ಬಿಡುಗಡೆಗೊಳಿಸುವರು. ಭೂವಿಜ್ಞಾನ, ಗಣಿಗಾರಿಕೆ ಮತ್ತು ತೋಟಗಾರಿಕೆ ಸಚಿವ ಎಸ್. ಎಸ್. ಮಲ್ಲಿಕಾರ್ಜುನ ಅವರು ಹಸ್ತ ಪ್ರತಿಗಳ ಬಿಡುಗಡೆ ಮಾಡುವರು. ಮುಖ್ಯ ಅತಿಥಿಗಳಾಗಿ ಶಾಸಕರುಗಳಾದ ಟಿ. ರಘುಮೂರ್ತಿ, ಎನ್.ವೈ. ಗೋಪಾಲಕೃಷ್ಣ, ಡಾ. ಎಂ. ಚಂದ್ರಪ್ಪ, ಬಿ.ಜಿ. ಗೋವಿಂದಪ್ಪ, ಕೆ.ಸಿ. ವೀರೇಂದ್ರ ಪಪ್ಪಿ, ವಿಧಾನಪರಿಷತ್ ಸದಸ್ಯರುಗಳಾದ ಡಾ. ವೈ.ಎ. ನಾರಾಯಣಸ್ವಾಮಿ, ಕೆ.ಎಸ್. ನವೀನ್, ಚಿದಾನಂದ ಎಂ. ಗೌಡ, ಬಬ್ಬೂರು ಗ್ರಾ.ಪಂ. ಅಧ್ಯಕ್ಷ ಪಿ. ಕರಿಯಣ್ಣ ಪಾಲ್ಗೊಳ್ಳುವರು. ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿ ಡಾ. ಆರ್.ಸಿ. ಜಗದೀಶ್ ಸ್ವಾಗತ ಮತ್ತು ಪ್ರಾಸ್ತಾವಿಕ ನುಡಿಗಳನ್ನಾಡುವರು. ಬೆಂಗಳೂರು ಕೃಷಿ ವಿ.ವಿ. ಕುಲಪತಿ ಡಾ. ಎಸ್.ವಿ. ಸುರೇಶ, ಧಾರವಾಡ ಕೃಷಿ ವಿವಿ ಕುಲಪತಿ ಡಾ. ಪಿ.ಎಲ್. ಪಾಟೀಲ, ರಾಯಚೂರು ಕೃಷಿ ವಿವಿ ಕುಲಪತಿ ಡಾ. ಎಂ. ಹನುಮಂತಪ್ಪ ಭಾಗವಹಿಸುವರು.

ವಿಶೇಷ ಆಹ್ವಾನಿತರಾಗಿ ನವದೆಹಲಿ ಐಸಿಎಆರ್ ಮಹಾನಿರ್ದೇಶಕ ಡಾ. ಹಿಮಾಂಶು ಪಾಠಕ್,ಬೆಂಗಳೂರು ವಿಭಾಗ ಪ್ರಾದೇಶಿಕ ಆಯುಕ್ತರು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಅಮ್ಲಾನ್ ಆದಿತ್ಯ ಬಿಸ್ವಾಸ್, ತೋಟಗಾರಿಕೆ ಇಲಾಖೆ ಕಾರ್ಯದರ್ಶಿ ಡಾ. ಶಮ್ಲಾ ಇಕ್ಬಾಲ್, ಕೃಷಿ ಇಲಾಖೆ ಕಾರ್ಯದರ್ಶಿ ಅನ್ಬುಕುಮಾರ್, ಕೃಷಿಆಯುಕ್ತವೈ.ಎಸ್.ಪಾಟೀಲ್, ಜಿಲ್ಲಾಧಿಕಾರಿ ದಿವ್ಯಪ್ರಭು , ಜಿ.ಪಂ. ಸಿಇಒ ಸೋಮಶೇಖರ್ ಎಸ್.ಜೆ., ತೋಟಗಾರಿಕೆ ನಿರ್ದೇಶಕ ರಮೇಶ್ ಡಿ.ಎಸ್ಭಾಗವಹಿಸುವರು.

## ಪ್ರಮುಖ ಸುದ್ದಿ

# ಕೈ ಕೊಟ್ಟ ಮಳೆ; 6 ಎಕರೆ ತೊಗರಿ ಬೆಳೆನಾಶ ಪಡಿಸಿದ ಹಾಯ್ಕಲ್ ರೈತ

» **ಹರೀಶ್ ತಿಮ್ಮಪ್ಪಯ್ಯನಹಳ್ಳಿ**

ನಾಯಕನಹಟ್ಟಿ: ತುರುವನೂರು ಹೋಬಳಿಯ ಬೆಳಗಟ್ಟ ಗ್ರಾಮ ಪಂಚಾಯಿತಿಯ ಹಾಯ್ಕಲ್ ಗ್ರಾಮದ ಸುಬಾಷ್‌ರೆಡ್ಡಿ ಎಂಬುವರು 6 ಎಕರೆ ತೊಗರಿ ಬಿತ್ತನೆ ಮಾಡಿದ್ದರು. ಮಳೆ ಬಾರದ ಕಾರಣ ಹೊಲದಲ್ಲಿ ಟ್ರಿಲ್ಲರ್ ಹೊಡಿಸಿದ್ದಾರೆ ಈ ಬಾರಿ ಮಳೆ ಬರುತ್ತೆ ಎಂಬ ನಂಬಿಕೆಯಿಂದ ತೊಗರಿ ಬಿತ್ತನೆ ಮಾಡಿದ್ದೆ. ಆದರು ಮತ್ತೆ ಮಳೆ ಮುನಿಸಿಕೊಂಡಿದೆ ಸಾಲ–ಸೂಲ ಮಾಡಿ ಬಿತ್ತನೆ ಮಾಡಿದ್ದರು ಸ್ನಹಿತರಲ್ಲಿ ಫೈನಾನ್ಸ್‌ನಲ್ಲಿ 50 ಸಾವಿರ ಹಣವನ್ನು ತಂದು ಹಾಕಿದ್ದೆ ಹೇಗೆ ಸಾಲ ತಿರಿಸುವುದು ಎನ್ನುವ ಆತಂಕದಲ್ಲಿದ್ದಾರೆ. ಸಮಯಕ್ಕೆ ಸರಿಯಾಗಿ ಮಳೆ ಬಾರದ ಕಾರಣ ಆಕಾಶದ ಕಡೆ ಮುಖಮಾಡಿದ್ದಾರೆ ಮಳೆ ಬಂದರೆ ಉತ್ತಮ ಫಸಲು ಸಿಗುತ್ತೆ ಎಂಬ ನಂಬಿಕೆ ಇಟ್ಟಿದ್ದರು. ಮಳೆರಾಯ ಕೈಕೊಟ್ಟಿದ್ದರಿಂದ ನಮಗೆ ಎಲ್ಲಾ ಭಯ ಮೂಡಿಸಿದೆ. ಚಿತ್ರದುರ್ಗ ಜಿಲ್ಲೆಯ ಕೃಷಿ ಇಲಾಖೆ ಅಧಿಕಾರಿಗಳು ಇತ್ತ ಕಡೆ ಗಮನಹ ಹರಿಸಿ ಮತ್ತು ನಮಗೆ ಹೆಚ್ಚಿನ ಪರಿಹಾರ ನೀಡಬೇಕೆಂದು ಎಂದು ಆಗ್ರಹಿಸಿದರು. ಮಳೆಯ ಕೊರತೆ ಹೀಗೆ ಮುಂದುವರೆದರೆ ಎಲ್ಲಾ ಬೆಳೆಗಳು ಗಂಭೀರ ಪರಿಣಾಮ ಎದುರಿಸಬೇಕಾಗುತ್ತದೆ. ರೈತರು ತೊಗರಿ ಬಿತ್ತನೆ ಮಾಡಿದ್ದು ತೊಗರಿ ಗಿಡಗಳನ್ನೆಲ್ಲಾ ಕೆಡಿಸುವ ಮೂಲಕ ಮುಂದಾಗುವ ನಷ್ಟವನ್ನು ತಪ್ಪಿಸಿಕೊಂಡರು ಆದರು ಈಗಾಗಲೇ 6 ಎಕರೆಯಲ್ಲಿ 1 ಎಕರೆಗೆ ಸಾವಿರಾರು ರೂಪಾಯಿಗಳು ಖರ್ಚು





ಆಗಿದೆ ಎನ್ನುತ್ತಾರೆ ರೈತರು. ಬಿತ್ತನೆ ಮಾಡಿದ ಇತ್ತ ಕಡೆ ಬೆಳೆಯು ಇಲ್ಲ ಮಳೆ ಬಾರದ ಕಾರಣ ಒಣಗಿ ಹೊಯಿತು ಹಾಗೇ ಬಿಟ್ಟರೆ ನಮಗೆ ಏನು ಸಿಗುವುದಿಲ್ಲ ಖರ್ಚು ಬಹಳ ಹೆಚ್ಚಾಗಿದೆ ರೈತರೇ ಬೆಳೆಗಳನ್ನು ಕೆಡಿಸಿದ್ದಾರೆ.

ಮುಂಗಾರು ಮಳೆ ಕೈಕೊಟ್ಟಿರುವುದರಿಂದ ಬಿತ್ತಿದ ಬೆಳೆಗಳು ಒಣಗಿ ಹೋಗಿತ್ತಿದ್ದು, ಇದನ್ನು ನೋಡಲಾಗದೆ ರೈತರು ಬೆಳೆಗಳನ್ನು ಉಳಿಸಿಕೊಳ್ಳಲು ರೈತರು ಬಹಳ ಕಷ್ಟ ಪಡುತ್ತಿದ್ದಾರೆ. ಮತ್ತೊಂದು ಕಡೆ ರೈತರೇ ಕೈಯಾರೆ ಬೆಳೆಗಳನ್ನು ನಾಶಪಡಿಸಿದರು. ಉತ್ತಮ ಮಳೆ ಬಂದರೆ ಸಾಕು ಬೆಳೆ ಬರುತ್ತದೆ ಎಂಬ ಆಷಾಭಾವ ರೈತರಲ್ಲಿ ಇದೆ ಮುಂಗಾರು ಮಳೆ ಸಮಯದಲ್ಲಿ ಅಲ್ಪ–ಸ್ವಲ್ಪ ರೈತರು ತೊಗರಿ ಬಿತ್ತನೆ ಮಾಡಿದ್ದಾರೆ ಮಳೆ ಬಾರದ ಕಾರಣ ಗಿಡಗಳು ಒಣಗಿ ಹೋಯಿತು. ಈ ಬಾರಿ ರೈತರಿಗೆ ಆರಂಭದಲ್ಲಿಯೇ ನಷ್ಟವಾಗಿದೆ ದೊಡ್ಡ ಮಳೆ ಬಾರದ ಕಾರಣ ಪುನಃ ರೈತರು ಹಣವನ್ನು ಖರ್ಚು ಮಾಡಿ ಬೆಳೆಗಳನ್ನು ಎಲ್ಲಾ ನಾಶ ಮಾಡುತ್ತಿದ್ದಾರೆ.




## ಫಾಸ್ಟ್ ನ್ಯೂಸ್

### ಖಾಲಿ ನಿವೇಶನ ಸ್ವಚ್ಛವಾಗಿಡಲು ಸೂಚನೆ

» ಚಿತ್ರದುರ್ಗ

ಚಿತ್ರದುರ್ಗ ನಗರಸಭೆಯ ವ್ಯಾಪ್ತಿಯಲ್ಲಿ ಇರುವ ಖಾಲಿ ನಿವೇಶನಗಳಿಗೆ ಫೆನ್ಸಿಂಗ್ ನಿರ್ಮಿಸಿಕೊಂಡು, ಸ್ವಚ್ಛವಾಗಿರಿಸಿಕೊಳ್ಳಬೇಕು ಎಂದು ನಗರಸಭೆ ಪೌರಾಯುಕ್ತರು ಸೂಚನೆ ನೀಡಿದ್ದಾರೆ. ನಗರ ವ್ಯಾಪ್ತಿಯಲ್ಲಿನ ಖಾಲಿ ನಿವೇಶನಗಳಲ್ಲಿ ಪಾರ್ಥೇನಿಯಂ, ಜಾಲಿ ಗಿಡ ಬೆಳೆದಿದ್ದು ಹಾಗೂ ಅಕ್ಕ-ಪಕ್ಕದ ಮನೆಗಳಿಂದ ಉತ್ಪತ್ತಿಯಾಗುವ ತ್ಯಾಜ್ಯ(ಕಸ)ವನ್ನು ಖಾಲಿ ಇರುವ ನಿವೇಶನದಲ್ಲಿ ಸುರಿಯುತ್ತಿದ್ದು, ಅಲ್ಲಿ ಕಸ ಸಂಗ್ರಹವಾಗುತ್ತಿರುವುದು ಕಂಡುಬಂದಿದೆ, ಅಲ್ಲದೆ ಖಾಲಿ ಜಾಗಗಳು ಬಿಡಾಡಿ ದನಗಳು, ಹಂದಿಗಳು, ನಾಯಿಗಳು ಇತರೆ ವಿಷಜಂತುಗಳ ವಾಸಸ್ಥಾನ ವಾಗುತ್ತಿರುವುದು ಕಂಡುಬರುತ್ತಿದೆ.ಖಾಲಿ ನಿವೇಶನಗಳಲ್ಲಿ ಮಳೆನೀರು ನಿಂತು ಸೊಳ್ಳೆಗಳು ಉತ್ಪತ್ತಿಯಾಗಿ ಮಲೇರಿಯಾ, ಡೆಂಗ್ಯೂ, ಚಿಕನ್‌ಗುನ್ಯ ಸೇರಿದಂತೆ ಇನ್ನಿತರೆ ಸಾಂಕ್ರಾಮಿಕ ರೋಗಗಳು ಹರಡುವ ಸಾಧ್ಯತೆ ಇರುತ್ತದೆ, ಅಲ್ಲದೆ ಇದು ನಗರದ ಸೌಂದರ್ಯಕ್ಕೂ ಸಹ ಧಕ್ಕೆ ಉಂಟಾಗುತ್ತಿದೆ. ಹೀಗಾಗಿ ಸಾರ್ವಜನಿಕರು ತಮ್ಮ ಖಾಲಿ ನಿವೇಶನಗಳಲ್ಲಿ ಇರುವಂತಹ ತ್ಯಾಜ್ಯವನ್ನು, ಗಿಡ ಗಂಟೆಗಳನ್ನು ತೆರವುಗೊಳಿಸಿ ಸ್ವಚ್ಛಗೊಳಿಸಬೇಕು. ಖಾಲಿ ನಿವೇಶನಕ್ಕೆ ಕಾಂಪೌಂಡ್, ಫೆನ್ಸಿಂಗ್ ನಿರ್ಮಿಸಿಕೊಳ್ಳಬೇಕು ತಪ್ಪಿದ್ದಲ್ಲಿ ಅಂತಹವರ ವಿರುದ್ಧ ಕರ್ನಾಟಕ ಸಾಂಕ್ರಾಮಿಕ ರೋಗಗಳ ನಿಯಂತ್ರಣ ಕಾಯ್ದೆ 2020ರ ಅನ್ವಯ ಕಾನೂನು ಕ್ರಮ ಜರುಗಿಸಲಾಗುವುದು.ಹೆಚ್ಚಿನ ಮಾಹಿತಿಗಾಗಿ ಆರೋಗ್ಯ ಶಾಖೆ ಸಂಪರ್ಕಿಸಬಹುದು.

### ಪಿ.ಎಂ ವಿಶ್ವಕರ್ಮ ಯೋಜನೆ ಸೌಲಭ್ಯಕ್ಕೆ ನೊಂದಣಿ ಮಾಡಿಸಿ

» ಚಿತ್ರದುರ್ಗ

ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ವತಿಯಿಂದ ಜಿಲ್ಲೆಯ ಗ್ರಾಮ, ನಗರ ಮಟ್ಟದಲ್ಲಿನ ವಿವಿಧ ವೃತ್ತಿಗಳಲ್ಲಿ ತೊಡಗಿಸಿಕೊಂಡಿರುವ ವೃತ್ತಿಪರ ಕುಶಲಕರ್ಮಿಗಳಿಗೆ ಪಿ.ಎಂ. ವಿಶ್ವಕರ್ಮ ಯೋಜನೆಯ ಸೌಲಭ್ಯಗಳಿಗೆ ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ. ಯೋಜನೆಯ ಸೌಲಭ್ಯ ಪಡೆಯಲು ಗ್ರಾಮ ಮತ್ತು ನಗರ ಪ್ರದೇಶಗಳಲ್ಲಿ ಬಡಿಗ ವೃತ್ತಿ ಮಾಡುವವರು, ದೋಣಿ ತಯಾರಿಸುವವರು, ಶಸ್ತ್ರ ತಯಾರಕರು, ಕಮ್ಮಾರ ವೃತ್ತಿ ಮಾಡುವವರು, ಕಲ್ಲುಕುಟಗ ವೃತ್ತಿ ಮಾಡುವವರು, ಬಟ್ಟೆ ಚಾಪೆ-ಕಸ ಪೊರಕೆ ತಯಾರಕರು, ಗೊಂಬೆ ಮತ್ತು ಆಟಿಕೆ ತಯಾರಕರು, ಕ್ಷೌರಿಕ ವೃತ್ತಿ ಮಾಡುವವರು, ಸುತ್ತಿಗೆ ಮತ್ತು ಉಪಕರಣಗಳನ್ನು ತಯಾರಿಸುವವರು, ಹೂಮಾಲೆ ತಯಾರಕರು, ಅಗಸರು ಮೀನು ಬಲೆ ಹೆಣೆಯುವವರು, ಶಿಲ್ಪಿ(ಮೂರ್ತಿ ಮತ್ತು ಕಲ್ಲಿನ ಕೆತ್ತನೆ), ಚಮ್ಮಾರ (ಪಾದರಕ್ಷೆ ತಯಾರಕರು), ಬೀಗ ತಯಾರಿಕ ಕುಶಲಕರ್ಮಿಗಳು ಯೋಜನೆಗೆ ಅರ್ಜಿ ಸಲ್ಲಿಸಬಹುದಾಗಿದೆ.ಯೋಜನೆಗಾಗಿ ನೊಂದಾಯಿಸಿಕೊಳ್ಳಲು ಆಧಾರ್ ಕಾರ್ಡ್, ಪಾನ್ ಕಾರ್ಡ್ (ಕಡ್ಡಾಯವಲ್ಲ), ರೇಷನ್ ಕಾರ್ಡ್ (ಕಡ್ಡಾಯವಲ್ಲ), ಆಧಾರ್ ಜೋಡಣೆಯಾಗಿರುವ ಮೊಬೈಲ್ ನಂಬರ್, ಬ್ಯಾಂಕ್ ಪಾಸ್ ಬುಕ್ ದಾಖಲೆಯೊಂದಿಗೆ ಖುದ್ದಾಗಿ ಫಲಾನುಭವಿಯೇ ಕೇಂದ್ರಕ್ಕೆ ತೆರಳಿ ನೊಂದಣಿ ಮಾಡಿಸಬೇಕು. ಜಿಲ್ಲೆಯಲ್ಲಿ ಮೇಲೆ ತಿಳಿಸಿದ ವೃತ್ತಿ ಕೈಗೊಳ್ಳುತ್ತಿರುವವರು ಯೋಜನೆಗಾಗಿ https://pmvishwakarma.gov.in ವೆಬ್‌ಸೈಟ್‌ನಲ್ಲಿ ನೊಂದಾಯಿಸಿಕೊಳ್ಳಬೇಕು.

### ವಿಕಲಚೇತನರಿಗೆ ವಿವಿಧ ಸೌಲಭ್ಯ: ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

» ಚಿತ್ರದುರ್ಗ

ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಿಂದ 2023-24ನೇ ಸಾಲಿಗೆ ವಿವಿಧ ಯೋಜನೆಗಳಿಗೆ ವಿಕಲಚೇತನರಿಂದ ಆಹ್ವಾನಿಸಲಾಗಿದ್ದ ಅರ್ಜಿ ಸಲ್ಲಿಕೆ ದಿನಾಂಕವನ್ನು ಸೆ.30 ರಿಂದ ಅಕ್ಟೋಬರ್ 15 ರವರೆಗೆ ವಿಸ್ತರಿಸಲಾಗಿದೆ.ಆಧಾರ ಯೋಜನೆ, ಮೆರಿಟ್ ವಿದ್ಯಾರ್ಥಿಗಳಿಗಾಗಿ ಪ್ರೋತ್ಸಾಹಧನ, ಮರಣ ಪರಿಹಾರ ನಿಧಿ (ಎಂಆರ್‌ಡಬ್ಲ್ಯೂ ವಿಆರ್‌ಡಬ್ಲ್ಯೂ), ವೈದ್ಯಕೀಯ ಪರಿಹಾರ ನಿಧಿ, ನಿರುದ್ಯೋಗ ಭತ್ಯೆ, ಪ್ರತಿಭೆ ಯೋಜನೆ, ಸಾಧನೆ ಯೋಜನೆ, ಶಿಶುಪಾಲನಾ ಭತ್ಯೆ ಯೋಜನೆಗಳಿಗೆ ವಿಕಲಚೇತನರು ಸುವಿಧಾ ತಂತ್ರಾಂಶದಡಿ ಆನ್‌ಲೈನ್ ಮೂಲಕ ಅರ್ಜಿಸಲ್ಲಿಸಬಹುದು. ಇಲಾಖೆಯ ವೆಬ್‌ಸೈಟ್ https://sevasindhu.karnataka.gov.in/sevasindhu/departmentservicesನಲ್ಲಿ ನಿಗದಿತ ನಮೂನೆಯಲ್ಲಿ ಅಗತ್ಯ ದಾಖಲಾತಿಯೊಂದಿಗೆ ಅರ್ಜಿ ಸಲ್ಲಿಸಿ ಅದರ ಪ್ರತಿಯನ್ನು ತಾಲ್ಲೂಕು ಪಂಚಾಯಿತಿ ಕಚೇರಿಯಲ್ಲಿರುವ ವಿವಿದೊದ್ದೇಶ ಪುನರ್ವಸತಿ ಕಾರ್ಯಕರ್ತರುಗಳಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ತಾಲ್ಲೂಕು ಪಂಚಾಯಿತಿ ಕಚೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿದೊದ್ದೇಶ ಪುನರ್ವಸತಿ ಕಾರ್ಯಕರ್ತರ ದೂರವಾಣಿ ಸಂಖ್ಯೆ ಚಿತ್ರದುರ್ಗ-9880821934, ಚಳ್ಳಕೆರೆ-9611266930, ಹಿರಿಯೂರು-9902888901, 9902898901, ಹೊಳಲ್ಕೆರೆ-9740030227, ಹೊಸದುರ್ಗ-9741829990, ಮೊಳಕಾಲ್ಮೂರು-9742725576 ಹಾಗೂ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿ ದೂರವಾಣಿ ಸಂಖ್ಯೆ 08194-235284 ಗೆ ಸಂಪರ್ಕಿಸಬಹುದು ಹಾಗೂ ಕಚೇರಿಗೂ ಭೇಟಿ ನೀಡಬಹುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಜೆ.ವೈಶಾಲಿ ತಿಳಿಸಿದ್ದಾರೆ.

# ಸರ್ಕಾರದಿಂದ ಶಿಶುಪಾಲನಾ ಕೇಂದ್ರದ ಸ್ಥಾಪನೆ

## ರಾಜ್ಯ ಅಂಗನವಾಡಿ ಕೇಂದ್ರಗಳ ಲಕ್ಷಾಂತರ ಕಾರ್ಯಕರ್ತರ ಬದುಕಿಗೆ ಕೊಳ್ಳಿ: ಸಿ.ವೈ.ಶಿವರುದ್ರಪ್ಪ ಕಿಡಿ

» ಚಳ್ಳಕೆರೆ

ಸರ್ಕಾರದ ಶಿಶುಪಾಲನಾ ಕೇಂದ್ರದ ಸ್ಥಾಪನೆ ರಾಜ್ಯ ಅಂಗನವಾಡಿ ಕೇಂದ್ರಗಳ ಲಕ್ಷಾಂತರ ಕಾರ್ಯಕರ್ತರ ಬದುಕಿಗೆ ಕೊಳ್ಳಿ ಇಡಲು ಹೊರಟ ಸರ್ಕಾರದ ಕ್ರಮವನ್ನು ಖಂಡಿಸಲಾಗುತ್ತಿದೆ ಎಂದು ಎಐಸಿಸಿ ರಾಜ್ಯ ಸಂಘಟನಾ ಕಾರ್ಯದರ್ಶಿ ಹಾಗೂ ರಾಜ್ಯ ಅಂಗನವಾಡಿ ಫೆಡರೇಷನ್‌ನ ಗೌರವಾಧ್ಯಕ್ಷ ಸಿ.ವೈ.ಶಿವರುದ್ರಪ್ಪ ತಿಳಿಸಿದರು.

ಅವರು, ಕಂಬಳಿ ಮಾರುಕಟ್ಟೆ ಭವನದಲ್ಲಿ ಹಮ್ಮಿಕೊಂಡಿದ್ದ ಅಂಗನವಾಡಿ ಕಾರ್ಯಕರ್ತೆಯರ ಸಭೆಯಲ್ಲಿ ಮಾತನಾಡಿ,

ಕಳೆದ ಹಲವಾರು ವರ್ಷಗಳಿಂದ ಗ್ರಾಮೀಣ ಭಾಗದ ಅಂಗನವಾಡಿ ಕೇಂದ್ರಗಳಲ್ಲಿ ಪುಟ್ಟಮಕ್ಕಳಿಗೆ ಲಾಲನೆ, ಪೋಷಣೆ ಮೂಲಕ ಅಕ್ಷರ ಅಭ್ಯಾಸವನ್ನು ಕಲಿಸುವ ಮೊದಲ ಗುರು ಅಂಗನವಾಡಿ ಕೇಂದ್ರದ ಸಹಾಯಕಿಯರು ಹಾಗೂ ಕಾರ್ಯಕರ್ತೆಯರು. ಗ್ರಾಮೀಣ ಭಾಗದಲ್ಲಿ ಪ್ರತಿ ಮಗುವಿನ ಆರೋಗ್ಯ ಹಾಗೂ ಶಿಕ್ಷಣದ ಬಗ್ಗೆ ಜವಾಬ್ದಾರಿಯುತವಾಗಿ



ಅಂಗನವಾಡಿ ಕೇಂದ್ರದಲ್ಲಿ ಕಾರ್ಯನಿರ್ವಹಿಸುವ ಸಂದರ್ಭದಲ್ಲಿ ಶಿಶುಪಾಲನಾ ಕೇಂದ್ರ ಸ್ಥಾಪನೆ ಮೂಲಕ ಅಂಗನವಾಡಿ ಕೇಂದ್ರಗಳನ್ನು ಮುಟ್ಟಲು ಹೊರಟಿರುವುದು ಖಂಡನೀಯ.

ರಾಜ್ಯದಲ್ಲಿ ಕಳೆದ ಸುಮಾರು 5 ತಿಂಗಳಿನಿಂದ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಪಕ್ಷದ ಸರ್ಕಾರ ಮುಖ್ಯಮಂತ್ರಿ ಎಸ್.ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದ ಸರ್ಕಾರ ಅಂಗನವಾಡಿ ಕೇಂದ್ರಗಳನ್ನು ಹೆಚ್ಚು ಬಲವರ್ಧನೆ ಮಾಡುತ್ತಾರೆಂಬ ನಂಬಿಕೆ ಇತ್ತು. ಚುನಾವಣಾ ಸಂದರ್ಭದಲ್ಲಿ ಪ್ರಚಾರಕ್ಕೆ ಆಗಮಿಸಿ ಕಾಂಗ್ರೆಸ್ ಪಕ್ಷದ ಅಧಿನಾಯಕಿ ಪ್ರಿಯಾಂಕಗಾಂಧಿ ಅಂಗನವಾಡಿ ಕಾರ್ಯಕರ್ತೆಯರ ವೇತನ ಹೆಚ್ಚಳದ ಬಗ್ಗೆ ಭರವಸೆ ನೀಡಿದ್ದರು. ಆದರೆ, ಸರ್ಕಾರ ಶಿಶುಪಾಲನಾ ಕೇಂದ್ರದ ಮೂಲಕ ಅಂಗನವಾಡಿಗಳನ್ನು ಕಾಲಕ್ರಮೇಣ ಇಲ್ಲದಂತೆ ಮಾಡಲು ಹೊರಟಿದೆ. ಇದರ ವಿರುದ್ಧ ಮುಂದಿನ ದಿನಗಳಲ್ಲಿ ರಾಜ್ಯದ ಲಕ್ಷಾಂತರ ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರು ಸರ್ಕಾರದ ವಿರುದ್ಧ ಬೀದಿಗಿಳಿದು ಪ್ರತಿಭಟನೆ ಮಾಡುವರು ಎಂದರು.

ರಾಜ್ಯಮುಖಂಡಕುಮಾರ್‌ಮಾತನಾಡಿ, ಗ್ರಾಮೀಣ ಭಾಗಗಳಲ್ಲಿ ಗರ್ಭಿಣಿ, ಬಾಣಂತಿಯರೂ ಸೇರಿದಂತೆ ಎಲ್ಲರಿಗೂ ಪೌಷ್ಠಿಂಕಾಶದ ಆಹಾರ ನೀಡುವ ಮೂಲಕ ಆರೋಗ್ಯ ಸುಧಾರಣೆಯಲ್ಲಿ ಪ್ರಮುಖ ಪಾತ್ರ ವಹಿಸುವುದು ಅಂಗನವಾಡಿ ಕೇಂದ್ರಗಳು. ಆದರೆ, ರಾಜ್ಯ ಸರ್ಕಾರ ಮಾತ್ರ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರ ಕೆಲಸ ಕಾರ್ಯಗಳ ಬಗ್ಗೆ ನಿರ್ಲಕ್ಷ್ಯ ತೋರುತ್ತಿರುವುದು ನೋವಿನ ಸಂಗತಿ ಎಂದರು.

ಅಧ್ಯಕ್ಷತೆಯಾಗಿ ಎಂ.ಪದ್ಮಕ್ಕ, ಉಪಾಧ್ಯಕ್ಷೆಯಾಗಿ ಜೆ.ಸಿ.ಸರೋಜಾ, ವೀಣಾ, ವಿಜಯಮ್ಮ, ಪ್ರಧಾನ ಕಾರ್ಯದರ್ಶಿಯಾಗಿ ಪಿ.ಪದ್ಮಮ್ಮ, ಕಾರ್ಯದರ್ಶಿಯಾಗಿ ವಿಮಲಾಕ್ಷಿ, ಲೀಲಾ, ಓಬಮ್ಮ, ಖಜಾಂಚಿಯಾಗಿ ಲಕ್ಷ್ಮಿ, ಕಾರ್ಯಕಾರಿ ಸಮಿತಿಗೆ 21 ನಿರ್ದೇಶಕರನ್ನು ಆಯ್ಕೆ ಮಾಡಲಾಯಿತು.

ಸಭೆಯ ಅಧ್ಯಕ್ಷತೆಯನ್ನು ಅಧ್ಯಕ್ಷ ಪಿ.ತಿಪ್ಪೇರುದ್ರಪ್ಪ ವಹಿಸಿದ್ದರು. ಎಐಟಿಯುಸಿ ಕಾರ್ಯಚಟುವಟಿಕೆಗಳ ಬಗ್ಗೆ ನಿರ್ಲಕ್ಷ್ಯ ತಾಳಿದ ಆರ್.ವೇದಾವತಿ ಸಂಘಟನೆಯಿಂದ ಉಚ್ಛಾಟಿಸಲಾಯಿತು. ಮುಖಂಡ ಜಾಫರ್ ಶರೀಫ್, ಅಂಗನವಾಡಿ ಕಾರ್ಯಕರ್ತೆಯರಾದ ನಿರ್ಮಲ, ಲಕ್ಷ್ಮೀದೇವಿ, ಪದ್ದಕ್ಕ, ವಿಮಲಾಕ್ಷಿ, ಪದ್ಮಾವತಿ, ವೀಣಾ, ಸರೋಜಮ್ಮ, ಮುಬೀನಾಭಾನು, ಓಬಮ್ಮ ಮುಂತಾದವರು ಉಪಸ್ಥಿತರಿದ್ದರು.

# ದುರ್ಗಕ್ಕೆ ಸಿಎಂ; ಕವಾಡಿಗರಹಟ್ಟಿಗೆ ಭೇಟಿ ನೀಡುವಂತೆ ಕರುನಾಡ ವಿಜಯಸೇನೆ ಆಗ್ರಹ

» ಚಿತ್ರದುರ್ಗ

ಮದುವೆ ಆರತಕ್ಷತೆಗೆ ಶುಕ್ರವಾರ ಚಿತ್ರದುರ್ಗಕ್ಕೆ ಆಗಮಿಸುತ್ತಿರುವ ಅಹಿಂದಾ ನಾಯಕ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಕವಾಡಿಗರಹಟ್ಟಿಗೆ ಭೇಟಿ ನೀಡಿ ಅಲ್ಲಿನ ಸಂತ್ರಸ್ಥರ ಸಂಕಟ ಆಲಿಸಲಿ ಎಂದು ಕರುನಾಡ ವಿಜಯಸೇನೆ ಜಿಲ್ಲಾಧ್ಯಕ್ಷ ಕೆ.ಟಿ.ಶಿವಕುಮಾರ್ ಒತ್ತಾಯಿಸಿದರು.

ಪತ್ರಕರ್ತರ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಖಾಸಗಿ ಕಾರ್ಯಕ್ರಮಕ್ಕೆ ಚಿತ್ರದುರ್ಗ ಬಂದು ಹೋಗಲು ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಕವಾಡಿಗರಹಟ್ಟಿಗೆ ಭೇಟಿ ನೀಡಲು ಪುರುಸೊತ್ತಿಲ್ಲವೇ? ಚುನಾವಣೆಯಲ್ಲಿ ದಲಿತರ ಮತ ಪಡೆದು ಅಧಿಕಾರಕ್ಕೆ ಬಂದಿರುವ ಸಿದ್ದರಾಮಯ್ಯನವರು ಒಂದು ವೇಳೆ ಕವಾಡಿಗರಹಟ್ಟಿಗೆ ಭೇಟಿ ನೀಡದಿದ್ದರೆ ಮುಂದಿನ ದಿನಗಳಲ್ಲಿ ರಾಜ್ಯ ಸರ್ಕಾರದ ವಿರುದ್ಧ ಹೋರಾಟ ನಡೆಸಲಾಗುವುದೆಂದು ಎಚ್ಚರಿಸಿದರು.

ಸೂಳೆಕೆರೆಯಿಂದ ಸರಬರಾಜಾಗುವ ಕಲುಷಿತ ನೀರು ಸೇವಿಸಿ ಕವಾಡಿಗರಹಟ್ಟಿಯಲ್ಲಿ ಆರು ಮಂದಿ ಮೃತಪಟ್ಟಿದ್ದು, ಇನ್ನೂರಕ್ಕೂ ಹೆಚ್ಚು ಜನ ಅಸ್ವಸ್ಥರಾಗಿ ಜಿಲ್ಲಾಸ್ಪತ್ರೆ ಹಾಗೂ ಬಸವೇಶ್ವರ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವರು, ಸಮಾಜ ಕಲ್ಯಾಣ ಸಚಿವರು, ಲೋಕಸಭಾ ಸದಸ್ಯರು



ಇನ್ನು ಅನೇಕರು ಭೇಟಿ ಸಂತ್ರಸ್ಥರಿಗೆ ಸಾಂತ್ವಾನ ಹೇಳಿದ್ದಾರೆ.

ಮೃತ ಕುಟುಂಬಗಳಿಗೆ ಸರ್ಕಾರ ಹತ್ತು ಲಕ್ಷ ರೂ.ಗಳ ಪರಿಹಾರ ನೀಡಿರುವುದು ಯಾವುದಕ್ಕೂ ಸಾಕಾಗುವುದಿಲ್ಲ. ಹಾಗಾಗಿ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಕವಾಡಿಗರಹಟ್ಟಿಗೆ ಭೇಟಿ ನೀಡಿ ತಲಾ ಒಂದು ಕೋಟಿ ರೂ. ಪರಿಹಾರ ಘೋಷಿಸಿ. ಮೃತ ಕುಟುಂಬದಲ್ಲಿ ಒಬ್ಬರಿಗೆ ಸರ್ಕಾರಿ ನೌಕರಿ, ಜಮೀನು, ನಿವೇಶನ ನೀಡಬೇಕು. ದಲಿತರ ಬಗ್ಗೆ ಏಕೆ ಅಷ್ಟೊಂದು ನಿರ್ಲಕ್ಷೆ ಎಂದು ಕೆ.ಟಿ.ಶಿವಕುಮಾರ್ ಪ್ರಶ್ನಿಸಿದರು.

ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಎಂದು ಹೇಳಿಕೊಂಡು ಸುತ್ತಾಡುತ್ತಿರುವ ಮಾಜಿ ಸಂಸದ ಬಿ.ಎನ್.ಚಂದ್ರಪ್ಪ, ಸ್ಥಳೀಯ ಶಾಸಕ ಕೆ.ಸಿ.ವೀರೇಂದ್ರಪಪ್ಪಿ, ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್, ಮಾಜಿ ಸಚಿವ ಹೆಚ್. ಆಂಜನೇಯ ಇವರುಗಳು ಮುಖ್ಯಮಂತ್ರಿ ಸಿದ್ದರಾಮಯ್ಯನವರನ್ನು ಕವಾಡಿಗರಹಟ್ಟಿಗೆ ಕರೆದುಕೊಂಡು ಹೋಗಿ ಅಲ್ಲಿ ಹರಿಜನರ ಪರಿಸ್ಥಿತಿಯನ್ನು ಮನವರಿಕೆ ಮಾಡಿ ಮೂಲ ಸೌಲಭ್ಯಗಳನ್ನು ತಲುಪಿಸಬೇಕು. ಇಲ್ಲವಾದಲ್ಲಿ ನಮ್ಮ ಪ್ರತಿಭಟನೆ ಮುಂದುವರೆಯುತ್ತದೆ ಎಂದು ಕೆ.ಟಿ.ಶಿವಕುಮಾರ್ ಆಕ್ರೋಶ ವ್ಯಕ್ತಪಡಿಸಿದರು.

ಕರುನಾಡ ವಿಜಯಸೇನೆ ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ವೀಣಗೌರಣ್ಣ, ಕಾರ್ಯದರ್ಶಿ ಜಗದೀಶ್, ಉಪಾಧ್ಯಕ್ಷೆ ರತ್ನಮ್ಮ, ಮಹಮದ್ ರಫಿ, ವಿಶ್ವನಾರಾಯಣಮೂರ್ತಿ, ಅಖಿಲೇಶ್, ಪ್ರದೀಪ್ ಆರ್. ಅವಿನಾಶ್, ಅಭಿಷೇಕ್, ಮಣಿಕಂಠ ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದರು.

# ಕುಡಿತಮುಕ್ತ ಸಮಾಜ; ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಕಾರ್ಯೋನ್ಮುಖ: ದಿನೇಶ್‌ಪೂಜಾರಿ



» ಚಳ್ಳಕೆರೆ

ರಾಜ್ಯದಲ್ಲಿ ಕಳೆದ ಹಲವಾರು ವರ್ಷಗಳಿಂದ ಕುಡಿತದಿಂದ ನಾಶವಾಗುವ ಕುಟುಂಬಗಳನ್ನು ರಕ್ಷಿಸಿ ಕುಡಿತಕ್ಕೆ ಒಳಗಾದವರನ್ನು ಸಹ ಸರಿದಾರಿಗೆ ತರುವ ನಿಟ್ಟಿನಲ್ಲಿ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿಸಿ ಟ್ರಸ್ಟ್, ಪೂಜ್ಯ ವೀರೇಂದ್ರಹೆಗ್ಗಡೆಯವರ ಮಾರ್ಗದರ್ಶನದಲ್ಲಿ ಮದ್ಯವರ್ಜನಾ ಶಿಬಿರ ನಡೆಸುವ ಮೂಲಕ ಜಾಗೃತಿ ಮೂಡಿಸುತ್ತಿದೆ ಎಂದು ಯೋಜನೆಯ ಚಿತ್ರದುರ್ಗ ಜಿಲ್ಲಾ ನಿರ್ದೇಶಕ ದಿನೇಶ್‌ಪೂಜಾರಿ ತಿಳಿಸಿದರು. ಅವರು, ನಗರದ ಜೈನ ಭವನದಲ್ಲಿ ಹಮ್ಮಿಕೊಂಡಿದ್ದ 1736ನೇ ಮದ್ಯವರ್ಜನಾ ಶಿಬಿರದ ಮೂರನೇ ದಿನದ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಚಿತ್ರದುರ್ಗ ಜಿಲ್ಲೆಯೂ ಸೇರಿದಂತೆ ರಾಜ್ಯದ 31 ಜಿಲ್ಲೆಗಳ ವ್ಯಾಪ್ತಿಯಲ್ಲಿ ಈ ಶಿಬಿರವನ್ನು ಆಯೋಜಿಸಲಾಗಿದೆ. ಪ್ರತಿ ಶಿಬಿರದಲ್ಲೂ ನೂರಾರು ಸಂಖ್ಯೆಯ ಮದ್ಯವೆಸನಿಗಳನ್ನು ಶಿಬಿರಕ್ಕೆ ದಾಖಲಿಸಿಕೊಂಡು ಅವರಿಗೆ ಸೂಕ್ತ ಮಾರ್ಗದರ್ಶನ ನೀಡಿ ಅವರ ಮನಪರಿವರ್ತನೆಗೆ ಪ್ರಾಮಾಣಿಕ ಪ್ರಯತ್ನ ನಡೆಸಲಾಗುತ್ತಿದೆ. ಶಿಬಿರದಲ್ಲಿ ಭಾಗವಹಿಸುವ ಬಹುತೇಕ ಶಿಬಿರಾರ್ಥಿಗಳು ಶಿಬಿರದ ನಂತರ ಮದ್ಯದ ಚಟದಿಂದ ದೂರ ಉಳಿದಿದ್ದಾರೆ ಎಂದರು. ಜಿಲ್ಲಾ ಜನಜಾಗೃತಿ ವೇದಿಕೆ ಅಧ್ಯಕ್ಷ ಬಿ.ಪಿ.ಓಂಕಾರಪ್ಪ, ನಿಕಟಪೂರ್ವ ಮಾರುತೇಶ್, ಉಪಾಧ್ಯಕ್ಷ ಮಂಜುನಾಥ, ಕಿರಣ್‌ಜೈನ್, ವಿನಯಕುಮಾರ್‌ಸುವರ್ಣ, ಜಿಲ್ಲಾ ಜನಜಾಗೃತಿ ವೇದಿಕೆ ಸದಸ್ಯರಾದ ಕೆ.ಎಂ.ಜಗದೀಶ್, ನೇತಾಜಿಪ್ರಸನ್ನ, ರೂಪ, ಬಸವರಾಜು ಮುಂತಾದವರು ಉಪಸ್ಥಿತರಿದ್ದರು.

# ಜಯಕರ್ನಾಟಕ ಜನಪರ ವೇದಿಕೆ ವಾರ್ಷಿಕೋತ್ಸವ

» ಚಿತ್ರದುರ್ಗ

ಜಯಕರ್ನಾಟಕ ಜನಪರ ವೇದಿಕೆ ಮೂರನೆ ವರ್ಷದ ವಾರ್ಷಿಕೋತ್ಸವದ ನಿಮಿತ್ತ ಕೋಟೆ ಠಾಣೆ ಇನ್ಸ್‌ಪೆಕ್ಟರ್ ಕಚೇರಿ ಆವರಣದಲ್ಲಿ ಸಸಿಗಳನ್ನು ನೆಡಲಾಯಿತು.

ಜಯಕರ್ನಾಟಕ ಜನಪರ ವೇದಿಕೆ ಜಿಲ್ಲಾಧ್ಯಕ್ಷ ಬಿ.ಟಿ.ರಾಜೇಂದ್ರ ಮಾತನಾಡಿ ವೇದಿಕೆಯ ಮೂರನೇ ವಾರ್ಷಿಕೋತ್ಸವದ ಅಂಗವಾಗಿ ನಗರದ ಹಲವು ಕಡೆ ಗಿಡಗಳನ್ನು ನೆಡಲಾಗಿದೆ. ಮನೆಗೊಂದು ಮರ, ಊರಿಗೊಂದು ಕೆರೆ, ಜಯಕರ್ನಾಟಕ ಜನಪರ ವೇದಿಕೆ ನಡೆ ನಿಸರ್ಗದ ಕಡೆ ಎನ್ನುವ ಅಭಿಯಾನ ಹಮ್ಮಿಕೊಂಡಿದ್ದು, ಜಿಲ್ಲಾಧಿಕಾರಿ ಕಚೇರಿ ಆವರಣ, ರಕ್ಷಣಾಧಿಕಾರಿ ಕಚೇರಿ ಆವರಣ ಹಾಗೂ ಬಡಾವಣೆ ಪೊಲೀಸ್ ಠಾಣೆ ಆವರಣ ಇನ್ನು ಮುಂತಾದ ಕಡೆ ಗಿಡಗಳನ್ನು ನೆಟ್ಟು ಪೋಷಿಸುವುದು ನಮ್ಮ ಉದ್ದೇಶ. ಇದರಿಂದ ಮುಂದಿನ ಪೀಳಿಗೆಗೆ ಹಸಿರು ಪರಿಸರವನ್ನು ಕೊಡುಗೆಯಾಗಿ ನೀಡಿದಂತಾಗುತ್ತದೆ ಎಂದು ಹೇಳಿದರು.

ಕೋಟೆ ಠಾಣೆ ಇನ್ಸ್‌ಪೆಕ್ಟರ್ ನಯೀಮ್ ಮಾತನಾಡುತ್ತ ಇತ್ತೀಚಿನ ದಿನಗಳಲ್ಲಿ ಗಿಡ-ಮರಗಳು ನಾಶವಾಗುತ್ತಿರುವುದರಿಂದ ಸಮಯಕ್ಕೆ ಸರಿಯಾಗಿ ಮಳೆಯಾಗುತ್ತಿಲ್ಲ. ಇದರಿಂದ ರೈತಾಪಿ ವರ್ಗ ಸೇರಿದಂತೆ ಸಕಲ ಜೀವರಾಶಿಗಳು ತೊಂದರೆ ಅನುಭವಿಸುವಂತಾಗಿದೆ. ಹಾಗಾಗಿ ಜಯಕರ್ನಾಟಕ ಜನಪರ ವೇದಿಕೆ ಪರಿಸರ ರಕ್ಷಣೆ ಬಗ್ಗೆ ವಿಶೇಷ ಕಾಳಜಿ ವಹಿಸಿ ಗಿಡಗಳನ್ನು ನೆಡಲು ಮುಂದಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಜಯಕರ್ನಾಟಕ ಜನಪರ ವೇದಿಕೆಯ ಕುಮಾರಸ್ವಾಮಿ, ಅಭಿಲಾಷ್, ಅಶೋಕ್, ಗಿರೀಶ್, ನಿರಂಜನ್, ನಾಗರಾಜ್, ದಾದು, ವಿನೋದ್‌ರಾಜ್, ಕಾರ್ತಿಕ್, ರಂಗಸ್ವಾಮಿ, ರಜಿನಿ, ಅಣ್ಣಪ್ಪ, ಮಧು, ಯತಿರಾಜ್, ರಾಕೇಶ್ ಇವರುಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.



ಜಯಕರ್ನಾಟಕ ಜನಪರ ವೇದಿಕೆಯಿಂದ ಕೋಟೆ ಠಾಣೆ ಇನ್ಸ್‌ಪೆಕ್ಟರ್ ಕಚೇರಿ ಆವರಣದಲ್ಲಿ ಗಿಡಗಳನ್ನು ನೆಡಲಾಯಿತು.

**ಪ್ರಮುಖ ಸುದ್ದಿ**

# ನುಡಿದಂತೆ ನಡೆಯುವ ಸರ್ಕಾರವಿದ್ದರೆ ಅದು ಕಾಂಗ್ರೆಸ್

» ನಾಯಕನಹಟ್ಟಿ

ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ರಾಜ್ಯದ ಜನತೆಗೆ ಉತ್ತಮ ಆಳ್ವಿಕೆ ನೀಡುತ್ತಿದ್ದಾರೆ ಎಂದು ಮೊಳಕಾಲ್ಮೂರು ಶಾಸಕ ಎನ್.ವೈ.ಗೋಪಾಲಕೃಷ್ಣ ಹೇಳಿದ್ದಾರೆ. ನಾಯಕನಹಟ್ಟಿ ಪಟ್ಟಣದ ಸುದ್ದಿಗಾರರೊಂದಿಗೆ ಮಾತನಾಡಿದ ಅವರು

ನುಡಿದಂತೆ ನಡೆದ ನಡೆಯುವ ಸರ್ಕಾರವಿದ್ದರೆ ಅದು ಕಾಂಗ್ರೆಸ್ ಸರ್ಕಾರ ಮಾತ್ರ ಎಂದರು ಮೊಳಕಾಲ್ಮೂರು ಕ್ಷೇತ್ರವನ್ನು ಅಭಿವೃದ್ಧಿ ಮಾಡುವುದೇ ನನ್ನ ಮೊದಲ ಆದ್ಯತೆ ಎಂದು ಹೇಳಿದರು.

ಬಳ್ಳಾರಿ ಲೋಕಸಭಾ ಕ್ಷೇತ್ರಕ್ಕೆ ಸ್ಪರ್ಧೆ ಮಾಡುತ್ತಾರೆ ಎನ್ನುವ ಊಹಾಪೋಹ ಕಾರ್ಯಕರ್ತರಲ್ಲಿದೆ. ಆದರೆ ಅದು ನನ್ನ ಅಭಿಪ್ರಾಯವಲ್ಲ. ಲೋಕಸಭಾ ಚುನಾವಣೆಗೆ ಸ್ಪರ್ಧಿಸುತ್ತಾರೆ ಎನ್ನುವ ಊಹಾಪೋಹ ಇಲ್ಲಿಂದಲೇ ಪ್ರಾರಂಭವಾಗಿದೆ. ಬಳ್ಳಾರಿ ಗ್ರಾಮಾಂತರ ಕ್ಷೇತ್ರದಿಂದ ವಿಧಾನ ಸಭಾ ಕ್ಷೇತ್ರದಿಂದ




ಗೆದ್ದು, ಶಾಸಕನಾಗಿದ್ದೆ. ಆದರೆ ಲೋಕಸಭಾ ಚುನಾವಣೆ ಸ್ಪರ್ಧೆಗೆ ಯಾವುದೇ ಚಿಂತನೆ ನಡೆಸಿಲ್ಲ. ಮೊಳಕಾಲ್ಮೂರು ಕ್ಷೇತ್ರಕ್ಕೆ ಶಾಸಕನಾಗಿ ನಾಲ್ಕೈದು ತಿಂಗಳುಗಳು ಮಾತ್ರ ಕಳೆದಿವೆ. ಜನರ ನಿರೀಕ್ಷೆ ಹೆಚ್ಚಾಗಿದೆ. ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಗಿಂತ ಕಾಂಗ್ರೆಸ್ ಹೆಚ್ಚಿನ ಮತಗಳನ್ನು ಪಡಿದಿದೆ. ಪಪಂ ಮುಖ್ಯಾಧಿಕಾರಿ ಹುದ್ದೆ ಖಾಲಿ ಇದೆ. ಒಂದು ವಾರದಲ್ಲಿ ಹುದ್ದೆ ಭರ್ತಿಯಾಗಲಿದೆ. ಈಗಾಗಲೇ ಮುಖ್ಯಮಂತ್ರಿಗಳು ಇದಕ್ಕೆ ಒಪ್ಪಿಗೆ ಸೂಚಿಸಿದ್ದಾರೆ. ಶೀಘ್ರದಲ್ಲಿ ಮುಖ್ಯಾಧಿಕಾರಿ ಅಧಿಕಾರ ಸ್ವೀಕರಿಸಲಿದ್ದಾರೆ ಎಂದರು.

ಕೆಪಿಸಿಸಿ ಉಪಾಧ್ಯಕ್ಷ ಬಿ.ಎನ್. ಚಂದ್ರಪ್ಪ ಮಾತನಾಡಿ, ಚಿತ್ರದುರ್ಗ ಕ್ಷೇತ್ರದಿಂದ ಸ್ಪರ್ಧಿಸಬೇಕು ಎಂದು ಚಿಂತನೆ ಮಾಡಿದ್ದೇನೆ. ಕ್ಷೇತ್ರದ ಕಾರ್ಯಕರ್ತರು ಸ್ಪರ್ಧೆಗೆ ಒತ್ತಾಯಿಸಿದ್ದಾರೆ. ಒಂದು ಬಾರಿ ಸಂಸತ್ ಸದಸ್ಯನಾಗಿ ಇಡೀ ಜಿಲ್ಲೆಯ ಜನರೊಂದಿಗೆ ಬೆರೆತಿದ್ದೇನೆ. ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ನಾಗೇಶ್ ರೆಡ್ಡಿ, ಮಾಜಿ ಕೌನ್ಸಿಲರ್ ಬಸಣ್ಣ, ಮುಖಂಡರಾದ ಮಾಜಿ ಗ್ರಾ.ಪಂ. ಸದಸ್ಯರು ಶ್ರೀಕಾಂತ್, ಮಾಜಿ ಪ.ಪಂ. ಸದಸ್ಯರು ಮನ್ಸೂರ್, ಮಾಜಿ ಸಮಾಜ ಕಲ್ಯಾಣ ಇಲಾಖೆ ಸಚಿವ ಹೆಚ್.ಆಂಜನೇಯರವರ ಆಪ್ತ ಕಾರ್ಯದರ್ಶಿ ಎನ್.ಮಾರುತಿ, ವಾಸೀಂ, ಹುಸೇನ್,ದಾದಾಪೀರ್,ಇಸ್ಮಾಯಿಲ್, ಗುರು ತಿಪ್ಪೇಶ್ ಮತ್ತಿತರರಿದ್ದರು.

ನಾಯಕನಹಟ್ಟಿಯಲ್ಲಿ ಬುಧವಾರ ಶಾಸಕ ಎನ್.ವೈ.ಗೋಪಾಲಕೃಷ್ಣ, ಕೆಪಿಸಿಸಿ ಉಪಾಧ್ಯಕ್ಷ ಬಿ.ಎನ್.ಚಂದ್ರಪ್ಪ ನಾನಾ ಗ್ರಾಮಗಳಲ್ಲಿ ಕಾರ್ಯಕರ್ತರನ್ನು ಭೇಟಿ ಮಾಡಿದರು.

## ಫಾಸ್ಟ್ ನ್ಯೂಸ್

### ಇಂದು ಹಾಲು ಉತ್ಪಾದಕರ ಸಹಕಾರ ಸಂಘದ ಕಾರ್ಯದರ್ಶಿಗೆ ತರಬೇತಿ

» **ಚಿತ್ರದುರ್ಗ**

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳಿ ನಿಯಮಿತ, ಜಿಲ್ಲಾ ಸಹಕಾರ ಯೂನಿಯನ್ ನಿಯಮಿತ ಇವರ ಸಂಯುಕ್ತ ಆಶ್ರಯದಲ್ಲಿ ಚಿತ್ರದುರ್ಗ ಮತ್ತು ಹಿರಿಯೂರು ತಾಲ್ಲೂಕುಗಳಲ್ಲಿ ಬರುವ ಹಾಲು ಉತ್ಪಾದಕರ ಸಹಕಾರ ಸಂಘಗಳ ಕಾರ್ಯದರ್ಶಿಗಳಿಗೆ ಒಂದು ದಿನದ ವಿಶೇಷ ತರಬೇತಿ ಕಾರ್ಯಕ್ರಮವನ್ನು ಇದೇ ಅಕ್ಟೋಬರ್ 6ರಂದು ಬೆಳಿಗ್ಗೆ 10 ಗಂಟೆಗೆ ನಗರದ ಸಹಕಾರ ಭವನ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.


ಸಹಕಾರ ರತ್ನ ಪುರಸ್ಕೃತರು ಹಾಗೂ ರಾಜ್ಯ ಸಹಕಾರ ಮಹಾಮಂಡಳ ನಿರ್ದೇಶಕ ಆರ್. ರಾಮರೆಡ್ಡಿ ಕಾರ್ಯಕ್ರಮ ಉದ್ಘಾಟಿಸುವರು. ಜಿಲ್ಲಾ ಸಹಕಾರ ಯೂನಿಯನ್ ಅಧ್ಯಕ್ಷ ಜೆ.ಶಿವಪ್ರಕಾಶ್ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಸಹಕಾರ ರತ್ನ ಪುರಸ್ಕೃತರು ಹಾಗೂ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳ ನಿರ್ದೇಶಕ ಎಸ್.ಆರ್.ಗಿರೀಶ್, ಸಹಕಾರ ರತ್ನ ಪುರಸ್ಕೃತರು ಹಾಗೂ ಕೆ.ಎಂ.ಎಫ್ ನಿರ್ದೇಶಕ ಸಿ.ವೀರಭದ್ರಬಾಬು, ಜಿಲ್ಲಾ ಸಹಕಾರ ಯೂನಿಯನ್ ಉಪಾಧ್ಯಕ್ಷೆ ಮಾತೃಶ್ರೀ ಎನ್. ಮಂಜುನಾಥ್, ಸಹಕಾರ ರತ್ನ ಪುರಸ್ಕೃತರು ಹಾಗೂ ಜಿಲ್ಲಾ ಸಹಕಾರ ಯೂನಿಯನ್ ನಿರ್ದೇಶಕರಾದ ಜಿಂಕಲ್ ಬಸವರಾಜ್, ಪಿ.ತಿಪ್ಪೇಸ್ವಾಮಿ, ಜಿ.ಪಿ. ಯಶವಂತ್‌ರಾಜ್, ಎನ್.ಹೆಚ್. ಭಾಗ್ಯ, ಬಿ.ಸಿ. ಸಂಜೀವಮೂರ್ತಿ, ಹೆಚ್.ಎಂ. ದ್ಯಾಮಣ್ಣ, ಹೆಚ್. ಎನ್ ತಿಪ್ಪೇಸ್ವಾಮಿ, ಹೆಚ್.ವಿ. ಪ್ರತಾಪಸಿಂಹ, ಜಿ.ಈ. ಅಜ್ಜಪ್ಪ, ಕೆ.ಹೆಚ್. ಜಗನ್ನಾಥ್, ರತ್ನಮ್ಮ, ಟಿ. ಮಹಾಂತೇಶ್ ಭಾಗವಹಿಸುವರು.

ವಿಶೇಷ ಆಹ್ವಾನಿತರಾಗಿ ಸಹಕಾರ ಸಂಘಗಳ ಜಂಟಿ ನಿಬಂಧಕರು ಹಾಗೂ ಕಾರ್ಯದರ್ಶಿ ಲಕ್ಷ್ಮೀಪತಯ್ಯ, ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ವ್ಯವಸ್ಥಾಪಕದ ನಿರ್ದೇಶಕ ಇಲ್ಯಾಸ ಉಲ್ಲಾ ಷರೀಫ್, ಶಿವಮೊಗ್ಗ ಹಾಲು ಒಕ್ಕೂಟ ವ್ಯವಸ್ಥಾಪಕದ ನಿರ್ದೇಶಕ ಎಸ್.ಜೆ. ಶೇಖರ್, ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆ ಉಪನಿರ್ದೇಶಕ ಕೆ. ಮಹೇಶ್ವರಪ್ಪ, ಸಹಕಾರ ಸಂಘಗಳ ಉಪನಿಬಂಧಕ ಟಿ. ಮಧು ಶ್ರೀನಿವಾಸ್, ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆ ಸಹಾಯಕ ನಿರ್ದೇಶಕ ಪಿ. ಅಂಜನಮೂರ್ತಿ, ಶಿಮುಲ್ ವ್ಯವಸ್ಥಾಪಕ ಎಸ್.ಎಂ. ಮೂರ್ತಿ, ಶಿಮುಲ್ ವ್ಯವಸ್ಥಾಪಕ ಉಪ ವ್ಯವಸ್ಥಾಪಕ ಕೆ.ಪಿ. ಸಂಜಯ್, ಶಿಮುಲ್ ವಿಸ್ತರಣಾಧಿಕಾರಿ ವಿನೂತ್ ಕುಮಾರ್, ಶಿಮುಲ್ ವಿಸ್ತರಣಾಧಿಕಾರಿ ಜಿ. ರವಿಚಂದ್ರ, ಶಿಮುಲ್ ವಿಸ್ತರಣಾಧಿಕಾರಿ ಎಸ್. ನಯಾಜ್ ಬೇಗ್ ಭಾಗವಹಿಸುವರು.

ಈ ತರಬೇತಿಗೆ ಉಪನ್ಯಾಸಕರಾಗಿ ಸಹಕಾರ ಅಭಿವೃದ್ಧಿ ಅಧಿಕಾರಿ ವಿ.ಜಿ.ಕುಲಕರ್ಣಿ ಅವರು ಸಹಕಾರ ಸಂಘಗಳಲ್ಲಿ ಇತ್ತೀಚೆಗೆ ತಿದ್ದುಪಡಿಯಾದ ಕಾಯ್ದೆ, ಕಾನೂನು ಮುಖ್ಯಾಂಶಗಳು, ಸಹಕಾರ ಸಂಘಗಳಲ್ಲಿ ಸಭೆಯನ್ನು ನಡೆಸುವ ವಿಧಾನಗಳು ಮತ್ತು ಚುನಾವಣೆ ಜರುಗಿಸುವ ಕುರಿತು ಹಾಗೂ ಸಹಕಾರ ಸಂಘಗಳಲ್ಲಿ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರಗಳ ನಿರ್ವಹಣೆ ಕುರಿತು ಉಪನ್ಯಾಸ ನೀಡುವರು ಎಂದು ಜಿಲ್ಲಾ ಸಹಕಾರ ಯೂನಿಯನ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ನಾಗರಾಜ ಪಾಟೀಲ್ ತಿಳಿಸಿದ್ದಾರೆ.

### ನ್ಯಾಯ, ಸ್ವಾತಂತ್ರ್ಯಕ್ಕಾಗಿ ಭಾರತದ ಅವಿರತ ಹೋರಾಟದ ಪ್ರತೀಕ ಭಗತ್ ಸಿಂಗ್

» **ಹೊಸದುರ್ಗ**



ಭಗತ್ ಸಿಂಗ್ ತಮ್ಮ ದೇಶಪ್ರೇಮದಿಂದ ಪರಕೀಯ ಆಡಳಿತವನ್ನು ಮಂಡಿಯೂರಿಸಲು ಶ್ರಮಿಸಿದರೆ, ಮತ್ತೊಂದೆಡೆ ತಮ್ಮ ವಿಚಾರಗಳಿಂದ ವಿಭಾಜಿತ ಭಾರತವನ್ನು ಸ್ವಾತಂತ್ರ್ಯ ಹೋರಾಟದಲ್ಲಿ ಒಗ್ಗೂಡಿಸಲು ಶ್ರಮಿಸಿದರು. ಭಗತ್ ಸಿಂಗರ ದೇಶಭಕ್ತಿ ಮತ್ತು ಅವರ ಚಿಂತನೆಗಳು ದೇಶಪ್ರೇಮಿಗಳಲ್ಲಿ ದೇಶ ಸೇವೆ ಎಂಬ ಕಿಡಿಯನ್ನು ಹತ್ತಿಸುತ್ತಿವೆ. ಅಲ್ಲದೇ ಯುವ ಮನಸ್ಸುಗಳನ್ನು ಆವರಿಸುತ್ತಿದೆ ನ್ಯಾಯ ಮತ್ತು ಸ್ವಾತಂತ್ರ್ಯಕ್ಕಾಗಿ ಭಾರತದ ಅವಿರತ ಹೋರಾಟದ ಪ್ರತೀಕ ಭಗತ್ ಸಿಂಗ್ ಎಂದು ಸದ್ಗುರು ಆಯುರ್ವೇದ ಉತ್ಪನ್ನಗಳ ಮಾಲೀಕ ಸದ್ಗುರುಪ್ರದೀಪ್ ಡಿ.ಎಸ್. ಹೇಳಿದರು.

ಪಟ್ಟಣದಲ್ಲಿ ಆಯೋಜಿಸಿದ್ದ ಭಗತ್ ಸಿಂಗರ ಜಯಂತಿ ಮತ್ತು ರಕ್ತದಾನ ಶಿಬಿರ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಭಾಗವಹಿಸಿ ಅವರು ಮಾತನಾಡಿದರು. ಭಗತ್ ಸಿಂಗ್ ರ 116 ನೇ ಜನ್ಮದಿನವನ್ನು ನಾವು ನೀವೆಲ್ಲರೂ ಆಚರಣೆ ಮಾಡುತ್ತಿದ್ದೇವೆ. ಅವರ ಜನ್ಮ ದಿನಾಚರಣೆ ಒಂದು ದಿನಕ್ಕೆ ಸೀಮಿತವಾಗದೆ, ಅವರ ವಿಚಾರಧಾರೆಗಳು ಮತ್ತು ಚಿಂತನೆಗಳು ಯುವ ಮನಸ್ಸುಗಳನ್ನು ತಲುಪುವಂತೆ ಮಾಡಬೇಕೆಂದು ತಿಳಿಸಿದರು.ಈ ಸಂಧರ್ಬದಲ್ಲಿ ಯುವ ಉದ್ಯಮಿ ದಿಲೀಪ್ ಗುರುಸ್ವಾಮಿ, ವಿರಾಟ್ ಹಿಂದೂ ಮಹಾಸಾಗರ ಗಣಪತಿ ಸೇವಾ ಟ್ರಸ್ಟ್ ಅಧ್ಯಕ್ಷ ಪ್ರದೀಪ್ ಮತ್ತು ಮುಖಂಡ ನವೀನ್, ಯುವ ಮುಖಂಡ ತುಂಬಿನಕೆರೆ ಬಸವರಾಜ್, ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ತಾಲೂಕು ಸಂಚಾಲಕ ಭಾನುಪ್ರಕಾಶ್ ಸೇರಿದಂತೆ ವೈದ್ಯರು, ಆರೋಗ್ಯ ಇಲಾಖೆ ಸಿಬ್ಬಂದಿಗಳು ಮತ್ತು ವಿರಾಟ್ ಹಿಂದೂ ಮಹಾಸಾಗರ ಗಣಪತಿ ಸೇವಾ ಟ್ರಸ್ಟ್ ಸದಸ್ಯರಿದ್ದರು. ಇದೇ ಸಂದರ್ಭದಲ್ಲಿ 50ಕ್ಕೂ ಹೆಚ್ಚು ಜನರು ಸ್ವಯಂ ಪ್ರೇರಿತವಾಗಿ ಬಂದು ರಕ್ತದಾನ ಮಾಡಿದರು.

---

ಮಾನಸಿಕ ಖಿನ್ನತೆಯವರನ್ನು ಗುರುತಿಸಿ ಚಿಕಿತ್ಸೆ, ಸಮಾಲೋಚನೆಯಿಂದ ಆತ್ಮಹತ್ಯೆ ತಡೆ: ಜಿಲ್ಲಾ ಮಾನಸಿಕ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ.ಜಿ.ಓ.ನಾಗರಾಜ್

# ಮದ್ಯ, ಮಾದಕ ವ್ಯಸನವೂ ಆತ್ಮಹತ್ಯೆಗೆ ಪ್ರೇರಣೆ

» **ಚಿತ್ರದುರ್ಗ**






ಮದ್ಯ ಮತ್ತು ಮಾದಕ ವಸ್ತುಗಳ ವ್ಯಸನವೂ ಆತ್ಮಹತ್ಯೆಗೆ ಪ್ರೇರಣೆಯಾಗಿದ್ದು, ಆತ್ಮಹತ್ಯೆ ತಡೆಗಟ್ಟುವಲ್ಲಿ ಸಮುದಾಯವು ಮಾನಸಿಕ ಖಿನ್ನತೆಯಲ್ಲಿರುವವರು, ಆತ್ಮಹತ್ಯೆಯ ಅಪಾಯದಲ್ಲಿರುವವರನ್ನು ಗುರುತಿಸಿ, ಮಾನಸಿಕ ಚಿಕಿತ್ಸೆ ಸಮಾಲೋಚನೆ ಕೊಡಿಸುವುದರ ಮೂಲಕ ತಡೆಗಟ್ಟಬಹುದು ಎಂದು ಜಿಲ್ಲಾ ಮಾನಸಿಕ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ.ಜಿ.ಓ.ನಾಗರಾಜ್ ಹೇಳಿದರು.

ನಗರದ ಸರ್ಕಾರಿ ಶಿಕ್ಷಕರ ಶಿಕ್ಷಣ ಮಹಾವಿದ್ಯಾಲಯದಲ್ಲಿ ಬುಧವಾರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ವಿಭಾಗ, ತಾಲ್ಲೂಕು ಆರೋಗ್ಯಾಧಿಕಾರಿಗಳ ಕಚೇರಿ ವತಿಯಿಂದ ಹಮ್ಮಿಕೊಂಡಿದ್ದ ವಿಶ್ವ ಆತ್ಮಹತ್ಯೆ ತಡೆಗಟ್ಟುವ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಆತ್ಮಹತ್ಯೆಗೆ ಪಕ್ಷಪಾತ, ಜಾತಿ, ಜನಾಂಗ, ಲಿಂಗ ಎಂಬುದಿಲ್ಲ. ಎಲ್ಲ ಜನಾಂಗದಲ್ಲೂ ಆತ್ಮಹತ್ಯೆ ಪ್ರಕರಣಗಳು ಕಂಡುಬರುತ್ತವೆ. ಮಾನಸಿಕ ಖಿನ್ನತೆಯಲ್ಲಿರುವವರನ್ನು ಗುರುತಿಸಿ ಚಿಕಿತ್ಸೆ, ಆಪ್ತ ಸಮಾಲೋಚನೆ ಮೂಲಕ ತಡೆಗಟ್ಟಬಹುದೆಂದು ತಿಳಿಸಿದರು.

ಆತ್ಮಹತ್ಯೆ ಎಂದರೆ ತನ್ನ ಜೀವನವನ್ನು ಕೊನೆಗೊಳಿಸುವ ಉದ್ದೇಶದಿಂದ ಮಾಡುವ ಕ್ರಿಯೆಗೆ ಆತ್ಮಹತ್ಯೆ ಎಂದು ಕರೆಯುತ್ತಾರೆ. ಆತ್ಮಹತ್ಯೆಯು ದುರಂತ ಮತ್ತು ದುಃಖದ ಸಂಗತಿಯಾಗಿದೆ. 2014ರ ಅಂಕಿ ಅಂಶಗಳ ಪ್ರಕಾರ ನಮ್ಮ ದೇಶದಲ್ಲಿ 1,31,66 ಜನ ಆತ್ಮಹತ್ಯೆಯಿಂದ ತಮ್ಮ ಜೀವನವನ್ನು ಕೊನೆಗಾಣಿಸಿಕೊಂಡಿದ್ದಾರೆ. ಆತ್ಮಹತ್ಯೆ ಪ್ರಕರಣಗಳು ದಿನೇ ದಿನೇ ಹೆಚ್ಚುತ್ತವೆ ಎಂದು ಆತಂಕ ವ್ಯಕ್ತಪಡಿಸಿದ ಅವರು, TELE MANAS Toll free Number 14416 ಅಥವಾ ಆರೋಗ್ಯ ಸಹಾಯವಾಣಿ 104 ಗೆ ಕರೆ ಮಾಡಿ ಸಮಾಲೋಚನೆ ಪಡೆಯಬಹುದು ಎಂದು ತಿಳಿಸಿದರು.

ಕ್ಲಿನಿಕಲ್ ಸೈಕಾಲಜಿಸ್ಟ್ ಟಿ.ಶ್ರೀಧರ್ ಮಾತನಾಡಿ, ವಿಶ್ವ ಆತ್ಮಹತ್ಯೆ ತಡೆಗಟ್ಟುವ ದಿನಾಚರಣೆಯನ್ನು ಪ್ರತಿ ವರ್ಷವೂ ಸೆಪ್ಟೆಂಬರ್ 10ನೇ ತಾರೀಖಿನಂದು ವಿಶ್ವದಾದ್ಯಂತ ಆತ್ಮಹತ್ಯೆಯನ್ನು ತಡೆಗಟ್ಟಲು ಮತ್ತು ಆತ್ಮಹತ್ಯೆ ಬಗ್ಗೆ ಜಾಗೃತಿ ಮೂಡಿಸಲು ವಿಶ್ವದಾದ್ಯಂತ ಪ್ರತಿ ವರ್ಷವೂ ಒಂದು ಘೋಷವಾಕ್ಯದೊಂದಿಗೆ ಆಚರಿಸಲಾಗುತ್ತದೆ ಎಂದು ತಿಳಿಸಿದ ಅವರು ವಿಶ್ವ ಆತ್ಮಹತ್ಯೆ ದಿನಾಚರಣೆ ಬಗ್ಗೆ ಸಂಕ್ಷಿಪ್ತವಾಗಿ ತಿಳಿಸಿದರು.

ಮನೋವೈದ್ಯೆ ಡಾ.ಆರ್.ಮಂಜುನಾಥ್ ಉಪನ್ಯಾಸ ನೀಡಿ, 2023ರ ವಿಶ್ವ ಆತ್ಮ ತಡೆಗಟ್ಟುವ ದಿನಾಚರಣೆಯ ಘೋಷ ವಾಕ್ಯ "ಕ್ರಿಯೆ ಮೂಲಕ ಭರವಸೆಯನ್ನು ಸೃಷ್ಟಿಸುವುದು" ಎಲ್ಲರೂ ಧೈರ್ಯವಾಗಿ ಕಷ್ಟಗಳನ್ನು ಎದುರಿಸಬಹುದು ಎಂದು ಉದಾಹರಣೆ ಮೂಲಕ ತಿಳಿಸಿದರು.

ಮಾನಸಿಕ ಆರೋಗ್ಯ ಮತ್ತು ಆತ್ಮಹತ್ಯಾ ಲಕ್ಷಣಗಳು, ಆತ್ಮಹತ್ಯೆ ತಡೆಗಟ್ಟುವುದು ಮಾನಸಿಕವಾಗಿ ನೆಮ್ಮದಿಯಾಗಿರುವುದು, ಮನಸ್ಸು ಮತ್ತು ಮಾನಸಿಕ ಆರೋಗ್ಯದ ಬಗ್ಗೆ ಸಂಕ್ಷಿಪ್ತವಾಗಿ ತಿಳಿಸಿದರು. ಭಾಗವಹಿಸಿದ ಎಲ್ಲಾ ಪ್ರಶಿಕ್ಷಣಾರ್ಥಿಗಳಿಗೆ Breathing exercise ಮೂಲಕ relaxation techniques ಅಭ್ಯಾಸ ಮಾಡಿಸಿದರು..

ಇದೇ ಸಂದರ್ಭದಲ್ಲಿ ಎಲ್ಲಾ ಪ್ರಶಿಕ್ಷಣಾರ್ಥಿಗಳಿಗೆ ವಿಶ್ವ ಆತ್ಮಹತ್ಯೆ ತಡೆಗಟ್ಟುವ ದಿನಾಚರಣೆ ಬಗ್ಗೆ ಜಾಗೃತಿ ಕರಪತ್ರಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್, ಸರ್ಕಾರಿ ಶಿಕ್ಷಣ ಮಹಾವಿದ್ಯಾಲಯ ಪ್ರಾಂಶುಪಾಲರು ಹಾಗೂ ಉಪನ್ಯಾಸಕರು, ಸಿಬ್ಬಂದಿ ವರ್ಗ ಹಾಗೂ ಪ್ರಶಿಕ್ಷಣಾರ್ಥಿಗಳು ಇದ್ದರು.

---

# ಹಿಂದೂ ಮಹಾಗಣಪತಿ ಶೋಭಾಯಾತ್ರೆ ನಗರದಲ್ಲಿ ಸಂಚರಿಸಿದ ಬೈಕ್‌ರ್‍ಯಾಲಿ



» **ಚಿತ್ರದುರ್ಗ**

ಅ. 8 ರಂದು ನಗರದಲ್ಲಿ ಹಿಂದೂ ಮಹಾಗಣಪತಿ ಶೋಭಾಯಾತ್ರೆ ನಡೆಯುತ್ತಿರುವ ಹಿನ್ನೆಲೆಯಲ್ಲಿ ಪೂರ್ವಭಾವಿಯಾಗಿ ಗುರುವಾರ ನಗರದಲ್ಲಿ ಬೈಕ್‌ರ್‍ಯಾಲಿ ನಡೆಯಿತು.

ಹೊಳಲ್ಕೆರೆ ರಸ್ತೆಯಲ್ಲಿರುವ ಕನಕವೃತ್ತದಲ್ಲಿ ಬೈಕ್ ರ್‍ಯಾಲಿ ಉದ್ಘಾಟಿಸಿ ಮಾತನಾಡಿದ ಬಜರಂಗದಳದ ಕರ್ನಾಟಕ ದಕ್ಷಿಣ ಪ್ರಾಂತ ಸಹ ಸಂಯೋಜಕ ಪ್ರಭಂಜನ್ ಹಿಂದೂ ಮಹಾಗಣಪತಿ ಶೋಭಾಯಾತ್ರೆಯಲ್ಲಿ ಸಮಸ್ತ ಹಿಂದೂ ಬಾಂಧವರು ಭಾಗವಹಿಸಿ ಒಗ್ಗಟ್ಟು ಪ್ರದರ್ಶಿಸಬೇಕಿದೆ. ಹಿಂದೂಗಳನ್ನು ಜಾಗೃತಿಗೊಳಿಸುವುದು ನಮ್ಮ ಉದ್ದೇಶವಾಗಿದ್ದು, ಸಮಸ್ತರು ಇದನ್ನೆ ಆಹ್ವಾನವೆಂದು ತಿಳಿದು ಶೋಭಾಯಾತ್ರೆಯಲ್ಲಿ ಭಾಗವಹಿಸುವಂತೆ ವಿನಂತಿಸಿದರು. ಬಸವಮೂರ್ತಿ ಮಾದಾರ ಚನ್ನಯ್ಯಸ್ವಾಮೀಜಿ, ಜಿ.ಎಂ.ಸುರೇಶ್, ಟಿ.ಬದ್ರಿನಾಥ್, ರಂಗಸ್ವಾಮಿ, ಕೇಶವ ಸೇರಿದಂತೆ ವಿಶ್ವಹಿಂದೂಪರಿಷತ್ ಹಾಗೂ ಬಜರಂಗದಳದ ನೂರಾರು ಕಾರ್ಯಕರ್ತರು ಬೈಕ್‌ರ್‍ಯಾಲಿಯಲ್ಲಿ ಭಾಗವಹಿಸಿದ್ದರು.ಓಂ ಚಿನ್ನೆಯುಳ್ಳ ಬೃಹದಾಕಾರವಾದ ಕೇಸರಿ ಭಾವುಟಗಳು ಬೈಕ್‌ರ್‍ಯಾಲಿಯಲ್ಲಿ ರಾರಾಜಿಸಿದವು.

ಕನಕ ಸರ್ಕಲ್‌ನಿಂದ ಹೊರಟ ಬೈಕ್‌ರ್‍ಯಾಲಿ ಸಂಗೊಳ್ಳಿರಾಯಣ್ಣ ವೃತ್ತ, ಬುರುಜನಹಟ್ಟಿ ಸರ್ಕಲ್, ಆನೆಬಾಗಿಲು, ಉಚ್ಚಂಗಿಯಲ್ಲಮ್ಮ ದೇವಸ್ಥಾನ, ರಂಗಯ್ಯನಬಾಗಿಲು, ಜೋಗಿಮಟ್ಟಿ ರೋಡ್, ಬುದ್ದ ಸರ್ಕಲ್, ಚೈತನ್ಯ ಸರ್ಕಲ್, ಬಿ.ಡಿ.ರೋಡ್, ಗಾಂಧಿ ಸರ್ಕಲ್, ಮೆದೇಹಳ್ಳಿ ರೋಡ್, ಎನ್.ಹೆಚ್-ಬೈಪಾಸ್, ಜೆ.ಸಿ.ಆರ್. ವಾಸವಿ ಸರ್ಕಲ್, ಅಂಬೇಡ್ಕರ್ ವೃತ್ತದ ಮುಂಭಾಗದಿಂದ ಹಳೆ ಮಾಧ್ಯಮ ಶಾಲೆ ಆವರಣದಲ್ಲಿ ಮುಕ್ತಾಯಗೊಂಡಿತು.

### ಹಿರಿಯರು ಹಾಕಿಕೊಟ್ಟ ಸನ್ಮಾರ್ಗದಲ್ಲಿ ನಾವೆಲ್ಲರೂ ನಡೆಯೋಣ: ಪ್ರಸನ್ನ



» **ಚಳ್ಳಕೆರೆ**

ನಾಡಿನೆಲ್ಲೆಡೆ ವಿಶ್ವಹಿರಿಯರ ನಾಗರೀಕರ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸುವ ಮೂಲಕ ಹಿರಿಯರಿಗೆ ಗೌರವವನ್ನು ಸಲ್ಲಿಸಲಾಗುತ್ತಿದೆ. ಹಿರಿಯ ಮಾರ್ಗದರ್ಶನದಿಂದ ಇಂದು ಸಮಾಜ ಅತ್ಯಂತ ಕ್ರಿಯಾಶೀಲವಾಗಿ ಕಾರ್ಯನಿರ್ವಹಿಸುತ್ತಿದೆ. ಹಿರಿಯರ ಕೊಡುಗೆಯನ್ನು ನಾವು ಎಂದೂ ಮರೆಯಲು ಸಾಧ್ಯವಿಲ್ಲವೆಂದು ತಾಲ್ಲೂಕು ಛಾಯಾಗ್ರಾಹಕರ ಸಂಘದ ಅಧ್ಯಕ್ಷ ನೇತಾಜಿ ಪ್ರಸನ್ನ ತಿಳಿಸಿದರು. ಅವರು, ನಗರದ ಬನಶ್ರೀ ವೃದ್ಧಾಶ್ರಮದ ಹಿರಿಯರಿಗೆ ಛಾಯಾಗ್ರಾಹಕರ ಸಂಘದಿಂದ ಉಪಹಾರ ಮತ್ತು ಹಣ್ಣು ವಿತರಿಸಿ ಮಾತನಾಡಿದರು. ಹಿರಿಯರು ಎಂದಿಗೂ ಆದರ್ಶಪ್ರಾಯರು, ತಮ್ಮದೇಯಾದ ಚಿಂತನೆಯಲ್ಲಿ ಸಮಾಜಕ್ಕೆ ಮಾರ್ಗದರ್ಶನ ಮಾಡಿದವರು. ಅವರು ಅಂದು ಪಟ್ಟ ಪರಿಶ್ರಮ ಇಂದು ನಾವೆಲ್ಲರೂ ಉತ್ತಮಬದುಕನ್ನು ನಡೆಸಲು ಸಾಧ್ಯವಾಗಿದೆ ಎಂದರು. ಪ್ರಧಾನ ಕಾರ್ಯದರ್ಶಿ ಚಂದ್ರಶೇಖರ್, ನಿರ್ದೇಶಕರಾದ ಬಸವರಾಜು, ಬಾಬು, ಓಬಳೇಶ್, ದಿವಾಕರ್, ಅಜಯ್, ಬೈಯಣ್ಣ, ಓಬಣ್ಣ ಮುಂತಾದವರು ಉಪಸ್ಥಿತರಿದ್ದರು. ವೃದ್ಧಾಶ್ರಮದ ವ್ಯವಸ್ಥಾಪಕಿ ಮಂಜುಳಾ ಸಿಹಿ,ಹಣ್ಣು ವಿತರಿಸಿದ ಛಾಯಾಗ್ರಾಹಕರ ಪ್ರತಿನಿಧಿಗಳಿಗೆ ಅಭಿನಂದನೆ ಸಲ್ಲಿಸಿದರು.

---

### ಆಂತರಿಕ ದೂರು ಸಮಿತಿ ರಚನೆ

ದಾವಣಗೆರೆ: ಮಹಿಳೆಯರು ಮಾಡುವ ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲೆ ನಡೆಯುವ ಲೈಂಗಿಕ ಕಿರುಕುಳ ತಡೆಗಟ್ಟುವ ನಿಟ್ಟಿನಲ್ಲಿ ಆಂತರಿಕ ದೂರು ಸಮಿತಿ ರಚನೆ ಮಾಡಲಾಗಿದೆ. ಮಹಿಳೆಯರ ಮೇಲಾಗುವ ಲೈಂಗಿಕ ಕಿರುಕುಳ ತಡೆಗಟ್ಟುವ ಹಾಗೂ ನಿಷೇಧಿಸುವ ಉದ್ದೇಶದಿಂದ ಪ್ರತಿ 3 ವರ್ಷಗಳಿಗೊಮ್ಮೆ ಆಂತರಿಕ ದೂರು ಸಮಿತಿಯನ್ನು ಪುನರ್ ರಚಿಸಬೇಕಾಗಿರುತ್ತದೆ. ಜಿಲ್ಲೆಯಲ್ಲಿ 10 ಮತ್ತು 10 ಕ್ಕಿಂತ ಹೆಚ್ಚು ಮಹಿಳೆಯರು ಕಾರ್ಯನಿರ್ವಹಿಸುತ್ತಿರುವ ನೋಂದಾಯಿತ ಸಹಕಾರ ಸಂಘಗಳು ಹಾಗೂ ಸಂಘ-ಸಂಸ್ಥೆಗಳಲ್ಲಿ ಆಂತರಿಕ ದೂರು ಸಮಿತಿಯನ್ನು ಕಡ್ಡಾಯವಾಗಿ ರಚನೆ ಮಾಡಬೇಕಾಗಿದ್ದು, ಆ ಸಮಿತಿಯಲ್ಲಿ ಒಬ್ಬರು ಅಧ್ಯಕ್ಷರು, ಮೂವರು ಸದಸ್ಯರು ಹಾಗೂ ಒಬ್ಬ ಸದಸ್ಯ ಕಾನೂನಿನ ಪರಿಣಿತರಾಗಿರಬೇಕು.

ಎಲ್ಲಾ ಸಂಘ ಸಂಸ್ಥೆಗಳು ಆಂತರಿಕ ದೂರು ಸಮಿತಿಯನ್ನು ರಚಿಸಿ, ಸಮಿತಿ ಆದೇಶದ ಪ್ರತಿಯೊಂದಿಗೆ ಸಹಕಾರ ಸಂಘಗಳ ಉಪ ನಿಬಂಧಕರ ಕಚೇರಿಗೆ ವರದಿ ಮಾಡಲು ಜಿಲ್ಲಾ ಸಂಘಗಳ ನೋಂದಣಾಧಿಕಾರಿ ತಿಳಿಸಿದ್ದಾರೆ.

---

**ಪ್ರಮುಖ ಸುದ್ದಿ**

# ಜನ ಸಾಮಾನ್ಯರಿಗೆ ಕನಿಷ್ಟ ಆರೋಗ್ಯ ಸೇವೆಯನ್ನ ನೀಡುವುದೇ ಪ್ರಾಥಮಿಕ ಆರೋಗ್ಯ ಸೇವೆಯಾಗಿದೆ

» **ಹೊಸದುರ್ಗ**



ಜನ ಸಾಮಾನ್ಯರಿಗೆ ಕನಿಷ್ಟ ಆರೋಗ್ಯ ಸೇವೆಯನ್ನ ನೀಡುವುದೇ ಪ್ರಾಥಮಿಕ ಆರೋಗ್ಯ ಸೇವೆಯ ಮುಖ್ಯ ಉದ್ದೇಶವಾಗಿದೆ ಅಂತಹ ಸೇವೆಯನ್ನ ಸಾರ್ವಜನಿಕರು ಪಡೆದುಕೊಂಡು ಆರೋಗ್ಯವಂತರಾಗಬೇಕೆಂದು ಕಂಗುವಳ್ಳಿ ಸರ್ಕಾರಿ ಆಯುರ್ವೇದಿಕೆ ಚಿಕಿತ್ಸಾಲಯದ (ಕ್ಷೇಮ ಕೇಂದ್ರ) ಉಪಮುಖ್ಯ ವೈದ್ಯಾಧಿಕಾರಿ ಡಾ: ಎಂ.ಎಲ್.ನಧಫ್ ಕರೆ ನೀಡಿದರು.

ತಾಲೂಕಿನ ಕಂಗುವಳ್ಳಿ ಸರ್ಕಾರಿ ಆಯುರ್ವೇದಿಕೆ ಚಿಕಿತ್ಸಾಲಯ ಆವರಣದಲ್ಲಿ ಸರ್ಕಾರಿ ಆಯುಷ್ ಇಲಾಖೆ, ಜಿಲ್ಲಾ ಪಂಚಾಯಿತಿ ಚಿತ್ರದುರ್ಗ ಇವರ ಸಹಯೋಗದೊಂದಿಗೆ ಆಯೋಜಿಸಲಾಗಿದ್ದ ಆಯುಷ್‌ಮಾನ್‌ಭವ ಮತ್ತು ಆಯುಷ್ ಆರೋಗ್ಯ ಮೇಳವನ್ನು ಉದ್ಘಾಟಿಸಿ ಮಾತನಾಡಿದರು.

ಆರೋಗ್ಯ ಕ್ಷೇಮ ಕೇಂದ್ರದ ವತಿಯಿಂದ ಆರೋಗ್ಯ ಮೇಳಗಳನ್ನು ನಡೆಸುವುದರ ಮೂಲಕ ಗ್ರಾಮೀಣ ಜನ ಆರೋಗ್ಯ ಸೇವೆಗಳಲ್ಲಿ ನಿರತರಾಗಿದ್ದಾರೆ,

ತಾಲೂಕಿನ ಆರೋಗ್ಯ ಕಾಳಜಿ ಸೆಂಟರ್,ಕಂಗುವಳ್ಳಿ ಚಿಕಿತ್ಸಾಲಯದ ಆವರಣದಲ್ಲಿ ಆರೋಗ್ಯ ಮೇಳವನ್ನ ಆಯೋಜಿಸುವುರ ಜೊತೆಗೆ ಯೋಗತರಬೇತಿ ಕಾರ್ಯಕ್ರಮವನ್ನು ರೋಗಿಗಳಿಗೆ ಚಿಕಿತ್ಸೆ ನೀಡಲಾಗುತ್ತಿದೆ, ಮುಖ್ಯವಾಗಿ ನಾನ್ ಕಮಿನಿಕೇಬಲ್ ಡಿಸಿಜೆ ಮತ್ತು ರಕ್ತದ ಒತ್ತಡ ಪರೀಕ್ಷ ಇಂತಹ ವಿಶೇಷ ಪರೀಕ್ಷೆಗಳನ್ನೆನ ಮಾಡಲಾಗುವುದು ಎಂದ ಅವರು ಯೋಗಾಸನಗಳ ಬಗ್ಗೆ ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ,ಹೆಬ್ಬಳ್ಳಿ ಗ್ರಾಮದ ಸರ್ಕಾರಿ ಆಯುರ್ವೇದ ಚಿಕಿತ್ಸಾಲಯದ ಉಪಮುಖ್ಯ ವೈದ್ಯಾಧಿಕಾರಿ ಡಾ: ಡಾ:ಮಹೇಶ್ ಜಿ.ಬಡಿಗೇರ್ ಸುಮಾರು 150 ರೋಗಿಗಳನ್ನ ಪರೀಕ್ಷಿಸಿ ಎಲ್ಲಾ ರೋಗಿಗಳ ರಕ್ತ ಪರೀಕ್ಷೆ ಮಾಡಿದರು.ಡಯಬಿಟೀಸ್ ಮತ್ತು ಬಿ.ಪಿ ಬಗ್ಗೆ ತಿಳುವಳಿಕೆ ನೀಡಿದರು. ಇದೇ ಸಂಧರ್ಬದಲ್ಲಿ ರೋಗಿಗಳಿಗೆ ಆಯುರ್ವೇದ ಚಿಕಿತ್ಸೆ ನೀಡಲಾಯಿತು. ಈ ಸಂಧರ್ಬದಲ್ಲಿ ಕಂಗುವಳ್ಳಿ ಉಪ ಕೇಂದ್ರದ ಕಾವ್ಯ,ಎ.ಎನ್. ಎಂ.ಭಾರತಿ,ಆಶಾ ಕಾರ್ಯಕರ್ತೆಯರಾದ ಸುಧಾ.ಮೀನ,ಕಾಶಮ್ಮ,ಪ್ರೇಮ, ಎ.ಎನ್. ಎಂ.ಭಾರತಿ ಮತ್ತು ಅಂಗನವಾಡಿ ಕಾರ್ಯಕರ್ತೆಯರಾದ ರಾಧಾಮಣಿ, ಪ್ರೇಮಾ, ಯೋಗ ತರಬೇತುದಾರರಾದ ಶ್ರೀಮತಿ ಅರುಣಕುಮಾರಿ, ಮರಳುಸಿದ್ದಪ್ಪ, ಕುಮಾರ ಮುಂತಾದವರು ಉಪಸ್ಥಿತರಿದ್ದರು.

**ಫಾಸ್ಟ್ ನ್ಯೂಸ್**



ದಾವಣಗೆರೆ 7-10-2023 ರಂದು ಪ್ರಮುಖ ರಾಜ ಬೀದಿಗಳಲ್ಲಿ ಬೃಹತ್ ಶೋಭಾ ಯಾತ್ರೆ ಮುಖಾಂತರ ಸ್ವಾಮಿಯ ಮೂರ್ತಿಯ ವಿಸರ್ಜನೆಯನ್ನು ಮಾಡಲಾಗುವುದು.

## ಅವಧಿ ಮೀರಿದ ಕಡತಗಳ ವಿಲೇವಾರಿ

» **ದಾವಣಗೆರೆ**

ಜಿಲ್ಲಾಗ್ರಾಹಕರವ್ಯಾಜ್ಯಗಳಪರಿಹಾರಆಯೋಗದಿಂದ ಅವಧಿ ಮೀರಿದ ಗ್ರಾಹಕರ ವ್ಯಾಜ್ಯಗಳು, ಅಮಲ್ಜಾರಿ ಅರ್ಜಿಗಳು ಹಾಗೂ ಸಂಕೀರ್ಣ ಅರ್ಜಿಗಳ ಕಡತಗಳನ್ನು ನಿಯಮಾನುಸಾರ ನಾಶಗೊಳಿಸಲು ಸೂಚಿಸಲಾಗಿದೆ. ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದಲ್ಲಿನ 2015 ರಿಂದ 2018ನೇ ಸಾಲಿನವರೆಗಿನ ವಿವಿಧ ಕಡತಗಳ ಮೂಲ ದಾಖಲೆಗಳನ್ನು ಈ ಸುತ್ತೋಲೆ ಹೊರಡಿಸಿದ ದಿನಾಂಕದಿಂದ 60 ದಿನಗಳ ಅವಧಿಯೊಳಗೆ ಗ್ರಾಹಕರು ಹಾಗೂ ವಕೀಲರು ಹಿಂಪಡೆಯಬೇಕು ಇಲ್ಲವಾದಲ್ಲಿ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಆದೇಶಾನುಸಾರ ಮೂಲ ಕಡತಗಳನ್ನು ವಿಲೇವಾರಿ ಮಾಡಲಾಗುವುದು ಎಂದು ಆಯೋಗದ ಅಧ್ಯಕ್ಷರು ಮಹಾತೇಶ್ ಈರಪ್ಪ ಶಿಗ್ಲಿ ತಿಳಿಸಿದ್ದಾರೆ

## ಕಿರು ಸಾಲ ಸೌಲಭ್ಯಕ್ಕಾಗಿ ಬೀದಿ ಬದಿ ವ್ಯಾಪಾರಿಗಳಿಂದ ಅರ್ಜಿ

» **ದಾವಣಗೆರೆ**

ಕೇಂದ್ರ ಸರ್ಕಾರದ ಆತ್ಮ ನಿರ್ಭರ್ ಯೋಜನೆಯಡಿ ಬೀದಿ ಬದಿ ವ್ಯಾಪಾರಿಗಳು ವ್ಯಾಪಾರ ವಿಸ್ತರಿಸಿಕೊಳ್ಳಲು ಬ್ಯಾಂಕ್ ಮೂಲಕ ಕಡಿಮೆ ಬಡ್ಡಿ ದರದಲ್ಲಿ ಕಿರು ಸಾಲ ಸೌಲಭ್ಯ ಕಲ್ಪಿಸಲು ಅರ್ಜಿ ಆಹ್ವಾನಿಸಲಾಗಿದೆ. ಬೀದಿ ಬದಿ ವ್ಯಾಪಾರಿಗಳಿಗೆ ಹಾಗೂ ಹಾಲು ಮಾರಾಟಗಾರರಿಗೆ ಮತ್ತು ಪತ್ರಿಕಾ ವಿತರಕರಿಗೂ ಆರ್ಥಿಕ ಸುಭದ್ರತೆಗಾಗಿ 3 ಕಂತುಗಳಲ್ಲಿ ಸಾಲ ಸೌಲಭ್ಯವನ್ನು ಕಲ್ಪಿಸಲಾಗುವುದು. ಮೊದಲ ಕಂತಿನಲ್ಲಿ ರೂ 10,000 ಸಾಲ ನೀಡಿ 12 ತಿಂಗಳ ಅವಧಿಯಲ್ಲಿ ಸಾಲ ಮರು ಪಾವತಿ ಮಾಡಿದಲ್ಲಿ ರೂ 20,000 ಸಾಲ ನೀಡಲಾಗುವುದು. ಪಡೆದ ಸಾಲವನ್ನು 18 ತಿಂಗಳ ಅವಧಿಯಲ್ಲಿ ಸಾಲ ಮರು ಪಾವತಿ ಮಾಡಿದಲ್ಲಿ ರೂ 50,000 ಸಾಲ ಸೌಲಭ್ಯ ನೀಡಲಾಗುವುದು. ಸಾಲ ಸೌಲಭ್ಯದ ಜೊತೆಗೆ ಕ್ಯೂ ಆರ್ ಕೋಡ್ ಮಾಡಿಸಿಕೊಳ್ಳಬೇಕು, ನಗರ ಸ್ಥಳೀಯ ಸಂಸ್ಥೆಗಳಿಂದ ಕೈಗೊಳ್ಳಲಾಗುವ ಸಮೀಕ್ಷೆಗೊಳಗಾಗಿ ಸಾಮಾಜಿಕ ಭದ್ರತಾ ಯೋಜನೆಗಳ ಸೌಲಭ್ಯವನ್ನು ಪಡೆದುಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಕಛೇರಿ ಸಮಯದಲ್ಲಿ ಸಂಬಂಧಪಟ್ಟ ಶಾಖೆಯಲ್ಲಿ ವಿಚಾರಿಸಬಹುದು ಎಂದು ಹರಿಹರ ನಗರ ಸಭೆ ಪೌರಾಯುಕ್ತರಾದ ಬಸವರಾಜಪ್ಪ ತಿಳಿಸಿದ್ದಾರೆ.

## ವಿಕಲಚೇತನರ ಕ್ಷೇತ್ರದಲ್ಲಿ ಸಾಧನೆಗೈದ ವ್ಯಕ್ತಿ, ಸಂಸ್ಥೆಗಳಿಂದ ರಾಜ್ಯ ಪ್ರಶಸ್ತಿಗೆ ಅರ್ಜಿ ಆಹ್ವಾನ

» **ದಾವಣಗೆರೆ**

ವಿಶ್ವ ವಿಕಲಚೇತನರ ದಿನಾಚರಣೆ ಅಂಗವಾಗಿ 2023-24ನೇ ಸಾಲಿನಲ್ಲಿ ವಿಕಲಚೇತನರ ಕ್ಷೇತ್ರದಲ್ಲಿ ಸಾಧನೆಗೈದ ವ್ಯಕ್ತಿ, ಸಂಸ್ಥೆ ಮತ್ತು ವಿಶೇಷ ಶಾಲೆಗಳಲ್ಲಿ 15 ವರ್ಷಗಳಿಗೂ ಮೇಲ್ಪಟ್ಟ ಸೇವೆ ಸಲ್ಲಿಸಿರುವ ಹಾಗೂ ಸೇವೆಯಲ್ಲಿರುವ ಶಿಕ್ಷಕರಿಗೆ ರಾಜ್ಯ ಪ್ರಶಸ್ತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತರು ನಿಗಧಿತ ನಮೂನೆಗಳನ್ನು ಇಲಾಖೆಯ ವೆಬ್‌ಸೈಟ್ WWW.dwdsc.kar.nic.in ಮೂಲಕ ಪಡೆದು, ಭರ್ತಿ ಮಾಡಿದ ಅರ್ಜಿಯನ್ನು ಅಕ್ಟೋಬರ್ 25 ರೊಳಗಾಗಿ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣಾ ಇಲಾಖೆ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂ.08192-263936 ಹಾಗೂ ಜಿಲ್ಲಾ ವಿಕಲಚೇತನರ ಸಹಾಯವಾಣಿ ದೂ 08192-263939ಗೆ ಸಂಪರ್ಕಿಸಬಹುದೆಂದು ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣಾಧಿಕಾರಿ ಡಾ. ಕೆ.ಕೆ. ಪ್ರಕಾಶ್ ತಿಳಿಸಿದ್ದಾರೆ.

# ಹೊಂದಾಣಿಕೆ ರಾಜಕಾರಣದಿಂದ ಜನರಲ್ಲಿ ಅಭದ್ರತೆ

» **ಚಿತ್ರದುರ್ಗ**

ರಾಜ್ಯದಲ್ಲಿ ಹೊಂದಾಣಿಕೆ ರಾಜಕೀಯದಿಂದ ಜನರಲ್ಲಿ ಅನುಮಾನ ಮತ್ತು ಅಭದ್ರತೆ ಕಾಡುತ್ತಿದೆ ಎಂದು ಕೆಪಿಸಿಸಿ ಕಾರ್ಯಾಧ್ಯಕ್ಷರು ಮಾಜಿ ಸಂಸದರಾದ ಬಿ.ಎನ್.ಚಂದ್ರಪ್ಪ ತಿಳಿಸಿದ್ದಾರೆ.

ಚಿತ್ರದುರ್ಗ ನಗರದ ಖಾಸಗಿ ಹೊಟೇಲ್‌ನಲ್ಲಿ ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಅವರು, ಜಾತ್ಯಾತೀತ ಜನತಾದಳವಾದ ಪಕ್ಷ ಇನ್ನ ಮೂಲಕ ಮಂತ್ರವನ್ನು ಬದಲಾಯಿಸುವ ಸ್ಥಿತಿಯಲ್ಲಿದೆ. ಕೋಮುವಾದವನ್ನು ದೂರ ಇಡಬೇಕೆಂದು ನಮ್ಮ ಕೈ ಜೋಡಿಸಿ ಸರ್ಕಾರವನ್ನು ರಚನೆ ಮಾಡಿದ್ದು ಈಗ ಅದೇ ಪಕ್ಷವನ್ನು ಅಪ್ಪಿಕೊಂಡಿದೆ. ಇದರಿಂದ ಅಲ್ಲಿನ ಕೆಲವು ನಾಯಕರುಗಳಿಗೆ ಇದನ್ನು ಸಹಿಸಿಕೊಳ್ಳಲಾಗುತ್ತಿಲ್ಲ ಇದರಿಂದ ಬೆಸತ್ತು ಕಾಂಗ್ರೆಸ್ ಪಕ್ಷವನ್ನು ಸೇರುವ ಆತುರದಲ್ಲಿದ್ದಾರೆ. ಪಕ್ಷದ ನಾಯಕರ ಈ ಒಪ್ಪಂದದಿಂದ ಜಾತ್ಯಾತೀತದಲ್ಲಿ ನಂಬಿಕೆಯನ್ನು ಇರಿಸಿದ್ದ ಜನರಲ್ಲಿ ಅನುಮಾನ ಮತ್ತು ಅಭದ್ರತೆ ಉಂಟಾಗಿದೆ ಎಂದು ದೂರಿದರು.

ಕಳೆದ 30 ವರ್ಷದಿಂದ ಏಕಾಂಗಿಯಾಗಿ ಚುನಾವಣೆಯನ್ನು ಎದುರಿಸಿದ ಪಕ್ಷ ಈಗ ಏಕಾಏಕಿಯಾಗಿ ಕೋಮುವಾದ ಪಕ್ಷವನ್ನು ಬೆಂಬಲಿಸ ಹೊರಟ್ಟಿರುವುದು ನಿಜಕ್ಕು ನಾಯಕರ ಈ ನಡೆಗೆ ಅನುಮಾನ ಉಂಟುಮಾಡಿದೆ.ಈಹೊಂದಾಣಿಕೆಯಿಂದ



ನಮ್ಮ ಪಕ್ಷಕ್ಕೆ ಅನುಕೂಲವಾಗಿದೆ. ಈ ಚುನಾವಣೆಯಲ್ಲಿ ಜನತೆ ಗ್ಯಾರೆಂಟಿಯನ್ನು ನಂಬಿ ಮತವನ್ನು ನೀಡುವುದರ ಮೂಲಕ 136 ಶಾಸಕರನ್ನು ಚುನಾಯಿಸಿದ್ದಾರೆ. ಇದು ರಾಜ್ಯದಲ್ಲಿ ಉತ್ತಮವಾದ ಬೆಳವಣಿಗೆಯಾಗಿದೆ. ರಾಜ್ಯದಲ್ಲಿ ಕಾಂಗ್ರೆಸ್ ನೇತೃತ್ವದ ಸರ್ಕಾರ ರಚನೆಯಾಗಿರುವುದು ಒಂದೆಡೆ ಸಂತಸವಾದರೆ ಮತ್ತೊಂದಡೆ ಜವಾಬ್ದಾರಿಯನ್ನು ಹೊಂದಿದೆ. ಕಾಂಗ್ರೆಸ್ ಜಾತ್ಯಾತೀತ ತತ್ವದಡಿಯಲ್ಲಿ ಕೆಲಸವನ್ನು ಮಾಡುತ್ತಿದೆ. ಎಂದು ಚಂದ್ರಪ್ಪ ತಿಳಿಸಿದರು.

ಶಿವಮೊಗ್ಗದಲ್ಲಿ ನಡದ ಕೋಮುವಾದ ಘಟನೆಗೆ ಕಾಂಗ್ರೆಸ್ ಕಾರಣವೆಂದು ಅಧ್ಯಕ್ಷ ಕಟೀಲ್ ಮತ್ತು ಸಚಿವ ಶೋಭಾರವರು ಹೇಳಿದ್ದಾರೆ ಇದು ಖಂಡನೀಯ, ರಾಜ್ಯದಲ್ಲಿ ಆಡಳಿತ ನಡಸುತ್ತಿರುವ ಯಾವ ಸರ್ಕಾರವೂ ಸಹಾ ತನ್ನ ಮುಖಕ್ಕೆ ತಾನೇ ಮಸಿಯನ್ನು ಬಳಿದುಕೊಳ್ಳುವುದಿಲ್ಲ, ಬೇರೆಯವರು ಮಾಡಿದರೆ ಅದನ್ನು ಖಂಡಿಸಿ ಅದಕ್ಕೆ ಕಾರಣರಾದವರಿಗೆ ಶಿಕ್ಷೆಯನ್ನು ಕೊಡಿಸುತ್ತದೆ. ಅದು ಬಿಟ್ಟು ಗಲಭೆಯನ್ನು ಮಾಡುವಂತೆ ಪ್ರಚೋದನೆ ಮಾಡುತ್ತದೆ ಎಂಭ ಈ ಇಬ್ಬರ ನಾಯಕರ ಹೇಳಿಕೆಯನ್ನು ಖಂಡಿಸುತ್ತದೆ ಎಂದು ಚಂದ್ರಪ್ಪ, ಈ ಪಕ್ಷ ಅಭೀವೃದ್ದಿಗಿಂತ ಜಾತಿಯನ್ನು ಮುಂದೆ ಇಟ್ಟುಕೊಂಡು ಕೆಲಸ ಮಾಡುತ್ತಿದೆ, ಇದರಿಂದ ರಾಜ್ಯದಲ್ಲಿ ಕೋಮು ಗಬೆಗೆಳು ಹೆಚ್ಚಾಗುತ್ತಿವೆ.

ಸಣ್ಣ ವಿಷಯವನ್ನು ಇಟ್ಟುಕೊಂಡು ಅದಕ್ಕೆ ತುಪ್ಪ ಸುರಿಯವ ಕೆಲಸವನ್ನು ರಾಜ್ಯದಲ್ಲಿ ಬಿಜೆಪಿ ಮಾಡುತ್ತಿದೆ. ಜಾತಿ ಬೀಜವನ್ನು ಬಿತ್ತುವ ಕಾರ್ಯವನ್ನು ಮಾಡುವುದರ ಮೂಲಕ ತನ್ನ ಜವಾಬ್ದರಿಂದ ನುಣಚಿಕೊಳ್ಳುತ್ತಿದೆ ಎಂದು ದೂರಿದರು.

ರಾಜ್ಯದಲ್ಲಿ ಬರಗಾಲ ಬಂದಿದೆ ಇದರ ಬಗ್ಗೆ ಜಿಲ್ಲಾ ಸಚಿವರು ರೈತರ ಸಮಸ್ಯೆಗಳನ್ನು ಅರ್ಥ ಮಾಡಿಕೊಂಡು ಸರ್ಕಾರ ಮತ್ತು ವಿಮಾ ಕಂಪನಿಗಳ ಜೊತೆಯಲ್ಲಿ ಮಾತನಾಡಿ ರೈತರ ಸಮಸ್ಯೆಗಳಿಗೆ ಪರಿಹಾರವನ್ನು ಕಂಡುಕೊಳ್ಳಬೇಕಿದೆ ಒದರ ಬಗ್ಗೆ ನಾನು ಮಾತನಾಡುತ್ತೇನೆ. ರಾಜ್ಯದಲ್ಲಿ ಸರ್ಕಾರ ರಚನೆಯಾಗಿದೆ ಅದು ಸರಿಯಾದ ರೀತಿಯಲ್ಲಿ ಕೆಲಸ ಮಾಡಲು 6 ರಿಂದ 8 ತಿಂಗಳ ಅಗತ್ಯ ಇದೆ ತದ ನಂತರ ಉತ್ತಮವಾದ ಕೆಲಸವನ್ನು ಮಾಡುತ್ತದೆ ಅಲ್ಲದೆ ಅಭೀವೃದ್ಧಿಯನ್ನು ಸಹಾ ಮಾಡುತ್ತಿದೆ ಈಗ ತಾತ್ಕಾಲಿಕವಾಗಿ ಅಭೀವೃದ್ದಿಯನ್ನು ನಿಲ್ಲಿಸಿರಬಹುದು ಮುಂದೆ ಪ್ರಾರಂಭವಾಗಲಿದೆ ಅಪಪರ್ ಭದ್ರಾ ಯೋಜನಯನ್ನು ಕೇಂದ್ರ ಸರ್ಕಾರ 5000 ಕೋಟಿ ರೂಗಳನ್ನು ನೀಡುವುದಾಗಿ ತಿಳಿಸಿತ್ತು. ಅದರೆ ಇದರ ಬಗ್ಗೆ ಯಾವ ಮಾತನ್ನು ಸಹಾ ಆಡಿಲ್ಲ ಈ ಹಿನ್ನಲೆಯಲ್ಲಿ ರಾಜ್ಯದ ಸಂಸದರು ಪ್ರಧಾನ ಮಂತ್ರಿಗಳನ್ನು ಭೇಟಿ ಈ ಯೋಜನೆಯ ಹಣವನ್ನು ಬಿಡುಗಡೆ ಮಾಡುವಂತೆ ಮನವಿ ಮಾಡಬೇಕಿದೆ ಇದೇ ರೀತಿ ಮುಖ್ಯಮಂತ್ರಿಗಳು ಸಹಾ ಪ್ರಧಾನ ಮಂತ್ರಿಗಳ ಮೇಲೆ ಒತ್ತಡ ತರವಂತೆ ಮನವಿ ಮಾಡಲಾಗುವುದು ಎಂದ ಅವರು ಈ ಭಾರಿ ಲೋಕಸಭಾ ಕ್ಷೇತ್ರದಲ್ಲಿ ನಾನು ಆಕಾಂಕ್ಷಿ ಅಲ್ಲ ಆದರೆ ಪಕ್ಷ ಟೀಕೇಟ್ ನೀಡಿದರೆ ಸ್ಪರ್ದೆ ಮಾಡುತ್ತೇನೆ ನಾನು ಪಕ್ಷದ ಶಿಸ್ತಿನ ಸಿಪಾಯಿ ಪಕ್ಷದ ಮಾರ್ಗದರ್ಶನದಂತೆ ನಡೆಯುತ್ತೇನೆ ಎಂದರು. ಗೋಷ್ಟಿಯಲ್ಲಿ ಡಿಸಿಸಿ ಅಧ್ಯಕ್ಷ ತಾಜ್ ಪೀರ್. ಕಾರ್ಯಧ್ಯಕ್ಷ ಹಾಲಸ್ವಾಮಿ, ಅಸಂಘಟಿತ ಕಾರ್ಮಿಕ ವಲಯದ ರಾಜ್ಯಾಧ್ಯಕ್ಷ ಜಿ.ಎಸ್.ಮಂಜುನಾಥ್, ಪ್ರಧಾನಕಾರ್ಯದರ್ಶಿ ಸಂಪತ್‌ಕುಮಾರ್, ವಿಧಾನ ಪರಿಷತ್ ಮಾಜಿ ಸದಸ್ಯೆ ಶ್ರೀಮತಿ ಜಯ್ಯಮ್ಮ, ಜಿ.ಪಂ. ಮಾಜಿ ಅಧ್ಯಕ್ಷ ಬಾಲರಾಜ್, ಕೆಪಿಸಿಸಿ ವಕ್ತಾರ ಬಾಲಕೃಷ್ಣ ಯಾದವ್, ಮೈಲಾರಪ್ಪ, ರಾಮನಾಯ್ಕ್, ಮಹಿಳಾ ಘಟಕದ ಅಧ್ಯಕ್ಷರಾದ ಶ್ರೀಮತಿ ಗೀತಾ ನಂದಿನಿ ಗೌಡ, ಬಿ.ಟಿ.ಜಗದೀಶ್, ಲಕ್ಷ್ಮೀಕಾಂತ್ ಸೇರಿದಂತೆ ಇತರರು ಭಾಗವಹಿಸಿದ್ದರು.

# ಆಹಾರ ಸರಿಯಾಗಿದ್ದರೆ ಔಷಧಿ ಬೇಡ

» **ಹೊಸದುರ್ಗ**

ಔಷಧವಿಲ್ಲದ ಚಿಕಿತ್ಸೆ ಆಯುರ್ವೇದದ ಮೂಲ ಉದ್ದೇಶ, ಯಾವುದೇ ಒಬ್ಬ ವ್ಯಕ್ತಿಗೆ ತಿನ್ನುವ ಆಹಾರದಲ್ಲಿ ತಪ್ಪಾದಾಗ ಔಷಧಿಯ ಪ್ರಯೋಜನವಿರುವುದಿಲ್ಲ, ಆಹಾರ ಸರಿಯಾಗಿದ್ದರೆ ಔಷಧಿಯ ಅವಶ್ಯಕೆ ಇರುವುದಿಲ್ಲ ಎಂದು ಸರ್ಕಾರಿ ಯೋಗ ಮತ್ತು ಪ್ರಕೃತಿ ಚಿಕಿತ್ಸಾ ಕೇಂದ್ರದ ವೈಧ್ಯ ಡಾ: ಬಾಹುಬಲಿ ಎಂ.ಎಸ್ ತಿಳಿಸಿದರು.


ಸರ್ಕಾರಿ ಯೋಗ ಮತ್ತು ಪ್ರಕೃತಿ ಚಿಕಿತ್ಸಾ ಕೇಂದ್ರ ಹೊಸದುರ್ಗ, ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಪ್ರಕೃತಿ ಮತ್ತು ಯೋಗ ವಿಜ್ಞಾನ ಕಾಲೇಜು ಆಸ್ಪತ್ರೆಗಳು ಉಜಿರೆ ಇವರ ಸಹಭಾಗಿತ್ವದಲ್ಲಿ ಪಟ್ಟಣದ ಸರ್ಕಾರಿ ಆಸ್ಪತ್ರೆಯ ಆವರಣದಲ್ಲಿ ಆಯೋಜಿಸಲಾಗಿದ್ದ ಉಚಿತ ಆರೋಗ್ಯ ತಪಾಸಣಾ ಮತ್ತು ಪ್ರಕೃತಿ ಚಿಕಿತ್ಸಾ ಶಿಬಿರದಲ್ಲಿ ಭಾಗವಹಿಸಿ ಮಾತನಾಡಿದರು.

ಈ ಹಿನ್ನೆಲೆಯಲ್ಲಿ ಸಾರ್ವಜನಿಕ್ಕರಿಗೆ ಅರಿವು ಕೂಡಿಸುವ ಸಲುವಾಗಿ ಇಂತಹ ಒಂದು ಕಾರ್ಯಕ್ರಮವನ್ನ ಆಯೋಜನೆ ಮಾಡಲಾಗಿದ್ದು




ಸಾರ್ವಜನಿಕರು ಆಯುರ್ವೇದದ ಸಂಪೂರ್ಣ ಮಾಹಿತಿ ಪಡೆದು ಅದರ ಪ್ರಯೋಜನೆ ಪಡೆದುಕೊಳ್ಳಬೇಕು ಎಂದು ಅವರು ಕರೆ ನೀಡಿದರು. ಶಿಬಿರದಲ್ಲಿ 400 ಕ್ಕೂ ಮಂದಿ ಭಾಗವಹಿಸಿ ಶಿವಬಿರದ ಪ್ರಯೋಜನೆ ಪಡೆದುಕೊಂಡರು.ಕಾರ್ಯಕ್ರವನ್ನು ಕನಕ ವಿದ್ಯಾಸಂಸ್ಥೆಯ ಅಧ್ಯಕ್ಷ ಡಾ:ಎಂ.ಹೆಚ್. ಕೃಷ್ಣಮೂರ್ತಿಉದ್ಘಾಟಿಸಿದರು.ಸರ್ಕಾರಿಆಸ್ಪತ್ರೆಯ ಆಡಳಿತ ವೈದ್ಯಾಧಿಕಾರಿ ಸಂಜಯ್.ಯು.ಎಸ್ ಅಧ್ಯಕ್ಷತೆ ವಹಿಸಿದ್ದರು, ಆಯುರ್ವೇದ ತಾಲೂಕು ಅಧಿಕಾರಿ ಉಮೇಶ್‌ಪಾಳೇಗಾರ್, ತಾಲೂಕು ಆರೋಗ್ಯಾಧಿಕಾರಿ ಡಾ:ರಾಘವೇಂದ್ರಪ್ರಸಾದ್, ಉಜಿರಿಯ ಡಾ:ಪ್ರಶಾಂತಶೆಟ್ಟಿ, ಇಂದಿರಾಗಾಂಧಿ ನರ್ಸಿಂಗ್ ಕಾಲೇಜಿನ ಪ್ರಾಂಶುಪಾಲರಾದ ಶ್ರೀಮತಿಲಾವಣ್ಯ ಸೇರಿದಂತೆ ಆಯುರ್ವೇದ ತಜ್ಞರು ಭಾಗವಹಿಸಿದ್ದರು.

## ರೈತರ ಆಗ್ರಹಕ್ಕೆ ಸರ್ಕಾರ ಸ್ಪಂಧಿಸಲಿ



» **ಹೊಸದುರ್ಗ**

ಬೆಂಗಳೂರಿನ ರಾಜಭವನ ಚಲೋ ಹಾಗೂ ಫ್ರೀಡಂ ಫಾರ್ಕ್‌ನಲ್ಲಿ ನಡೆದ ಹಕ್ಕೋತ್ತಾಯ ಕಾರ್ಯಕ್ರಮದಲ್ಲಿ ಹೊಸದುರ್ಗ ತಾಲೂಕು ರೈತರ ಸಂಘದ ತೆಂಗುಬೆಳೆಗಾರರ ಜೋತೆ ಭಾಗಿಯಾಗಿದ್ದ ಸಮಾಜ ಸೇವಕ ದಿಲ್ಸ್ ದಿಲೀಪ್‌ಗುರುಸ್ವಾಮಿ ರೈತರ ಆಗ್ರಹಕ್ಕೆ ಸರ್ಕಾರಗಳು ಬೇಗ ಸ್ಪಂಧಿಸಲಿ ಎಂದು ಆಶಿಸಿದರು.ಇದೇ ಸಂಧರ್ಬದಲ್ಲಿ ರಾಜ್ಯ ಎಪಿಎಂಸಿ ನಿರ್ಧೇಶಕ ಗಂಗಾಧರಸ್ವಾಮಿ ಆಗಮಿಸಿ ರೈತರ ಮನವಿಯನ್ನ ಸ್ವೀಕರಿಸಿ ಸಮಸ್ಯೆಗಳನ್ನು ಬಗೆಹರಿಸುವ ಆಶ್ವಾಸನೆ ನೀಡಿದರು.

# 12 ಜಿಲ್ಲೆಗಳಲ್ಲಿ ಬರಪೀಡಿತ ಪ್ರದೇಶಗಳಿಗೆ ಕೇಂದ್ರ ಬರ ತಂಡ ಭೇಟಿ

» **ಬೆಂಗಳೂರು**

ರಾಜ್ಯದಲ್ಲಿ ಮಳೆ ಕೈಕೊಟ್ಟಿರುವುದರಿಂದ ಬರ ಪರಿಸ್ಥಿತಿ ತಲೆದೋರಿದ್ದು, ಈ ಹಿನ್ನೆಲೆಯಲ್ಲಿ ರೈತಾಪಿವರ್ಗ ಸಂಕಷ್ಟಕ್ಕೆ ಸಿಲುಕಿದೆ. ಈ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರದ ಮೂರು ತಂಡಗಳು ಇಂದು ರಾಜ್ಯಕ್ಕೆ ಭೇಟಿ ನೀಡಿದ್ದು, ಬರಪೀಡಿತ ಪ್ರದೇಶಗಳಿಗೆ ಭೇಟಿ ನೀಡಿ ವಸ್ತುಸ್ಥಿತಿ ಪರಿಶೀಲನೆ ನಡೆಸುವ ಕಾರ್ಯಕ್ಕೆ ಚಾಲನೆ ನೀಡಿದೆ. 13 ಜಿಲ್ಲೆಗಳಲ್ಲಿ ಕೇಂದ್ರದ ಬರ ಅಧ್ಯಯನ ತಂಡ ತೆರಳಿ ಮಳೆ ಕೊರತೆ, ಬೆಳೆ ನಷ್ಟವಾಗಿರುವ ಬಗ್ಗೆ ರೈತರಿಂದ ಮಾಹಿತಿ ಸಂಗ್ರಹಿಸಿದೆ.

ಮೂರು ತಂಡಗಳಲ್ಲಿ ಒಟ್ಟು 10 ಸದಸ್ಯರ ಅಧಿಕಾರಿಗಳ ತಂಡ ರಾಜ್ಯಕ್ಕೆ ಭೇಟಿ ನೀಡಿದ್ದು, ರಾಜ್ಯ ಪ್ರಕೃತಿ ವಿಕೋಪ ನಿರ್ವಹಣಾ ಕೇಂದ್ರಕ್ಕೆ ಭೇಟಿ ಕೊಟ್ಟು ಮಾಹಿತಿ ಪಡೆದುಕೊಂಡಿತು. ಬಳಿಕ ವಿಧಾನಸೌಧದ ಕೊಠಡಿಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯರವರನ್ನು ಭೇಟಿ ಮಾಡಿತು.ಈ ವೇಳೆ ರಾಜ್ಯದಲ್ಲಿ ಮಳೆ ಕೈಕೊಟ್ಟು ಬರಪರಿಸ್ಥಿತಿ ಉಂಟಾಗಿರುವ ಬಗ್ಗೆ ಕೇಂದ್ರದ ಅಧ್ಯಯನ ತಂಡಕ್ಕೆ ಮುಖ್ಯಮಂತ್ರಿಗಳು ವಿಸ್ತೃತ ಮಾಹಿತಿ ನೀಡಿದರು.ಇಂದು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವಾಲಯದ ಜಂಟಿ ಕಾರ್ಯದರ್ಶಿ ಅಜಿತ್‌ಕುಮಾರ್ ಸಾಹೋ ಅವರ ನೇತೃತ್ವದ ಮೊದಲ ತಂಡ ರಾಜ್ಯಕ್ಕೆ ಆಗಮಿಸಿ ಇಂದು ಬೆಳಗಾವಿಗೆ ತೆರಳಿ ನಾಳೆ ಬೆಳಗಾವಿ ಮತ್ತು ವಿಜಯಪುರ ಜಿಲ್ಲೆಗಳಲ್ಲಿ ಬರಪರಿಸ್ಥಿತಿಯನ್ನು ಪರಿಶೀಲನೆ ನಡೆಸಲಿದೆ.ಅ. 7 ರಂದು ಬಾಗಲಕೋಟೆ ಹಾಗೂ ಧಾರವಾಡ ಜಿಲ್ಲೆಗಳಿಗೆ ಭೇಟಿ ನೀಡಿ ಬರ ಪರಿಸ್ಥಿತಿಯನ್ನು ಅಧ್ಯಯನ ಮಾಡಿ ಸಂಕಷ್ಟಕ್ಕೆ ಗುರಿಯಾಗಿರುವ ರೈತಾಪಿ ವರ್ಗವನ್ನು ಭೇಟಿ ಮಾಡಿ ಅವರಿಂದ ಅಹವಾಲು ಸ್ವೀಕರಿಸಲಿದೆ. ಮತ್ತೊಂದು ತಂಡ ನಾಳೆ ಚಿಕ್ಕಬಳ್ಳಾಪುರ, ತುಮಕೂರು ಜಿಲ್ಲೆಗಳಿಗೆ ಪ್ರವಾಸಕ್ಕೈಗೊಂಡು ಅಧ್ಯಯನ ನಡೆಸಲಿದೆ.

ಅ. 7 ರಂದು ಚಿತ್ರದುರ್ಗ ಮತ್ತು ದಾವಣಗೆರೆ ಜಿಲ್ಲೆಗಳಿಗೆ ಭೇಟಿ ನೀಡಿದ ನಂತರ ಅ. 8 ರಂದು ಬೆಂಗಳೂರು ಗ್ರಾಮಾಂತರ ಜಿಲ್ಲೆಗೂ ತೆರಳಿ ಬರ ಪರಿಸ್ಥಿತಿ ಅಧ್ಯಯನ ನಡೆಸಲಿದ್ದಾರೆ.

13 ಜಿಲ್ಲೆಗಳಿಗೆ ಭೇಟಿ ನೀಡಲಿರುವ ಕೇಂದ್ರದ ಬರ ಅಧ್ಯಯನ ತಂಡದ ಅಧಿಕಾರಿಗಳಿಗೆ ಸಂಬಂಧಪಟ್ಟ ಜಿಲ್ಲಾಧಿಕಾರಿಗಳು ಪರಿಶೀಲನೆ ನಡೆಸಲಿದ್ದು, ಮಳೆ ಕೊರತೆಯಿಂದ ಉಂಟಾಗಿರುವ ವಸ್ತುಸ್ಥಿತಿಯನ್ನು ಮನವರಿಕೆ ಮಾಡಿಕೊಡಲಿದ್ದಾರೆ.

ಮೊದಲ ತಂಡದಲ್ಲಿ ಎಣ್ಣೆ ಬೀಜಗಳ ಅಭಿವೃದ್ಧಿ ಇಲಾಖೆ ನಿರ್ದೇಶಕ ಡಾ. ಜಿ. ಪೊನ್ನುಸ್ವಾಮಿ, ವೆಚ್ಚ ವ್ಯವಹಾರಗಳ ಇಲಾಖೆಯ ಸಹಾಯಕ ನಿರ್ದೇಶಕ ಮಹೇಂದ್ರಚಂಡೆಲಯ ಅವರೊಂದಿಗೆ ಇತರ ಸದಸ್ಯರು ಭೇಟಿ ನೀಡಲಿದ್ದಾರೆ.2ನೇ ತಂಡದಲ್ಲಿ ಕೇಂದ್ರದ ಕುಡಿಯುವ ನೀರು ಹಾಗೂ ಸ್ವಚ್ಛತಾ ಸಚಿವಾಲಯದ ಹೆಚ್ಚುವರಿ ಸಲಹೆಗಾರ ಡಿ. ರಾಜಶೇಖರ್, 2ನೇ ತಂಡದ ನೇತೃತ್ವ ವಹಿಸಿದ್ದಾರೆ. ಕೇಂದ್ರದ ಜಲ ಆಯೋಗದ ನಿರ್ದೇಶಕ ಅಶೋಕ್‌ಕುಮಾರ್ 3ನೇ ತಂಡದ ನೇತೃತ್ವ ವಹಿಸಿದ್ದಾರೆ. ಈ ಮೂರು ತಂಡಗಳು ಬರಪೀಡಿತ ಜಿಲ್ಲೆಗಳಿಗೆ ಭೇಟಿಕೊಟ್ಟು ಅ. 9 ರಂದು ಬೆಂಗಳೂರಿಗೆ ವಾಪಸ್ಸಾಗಿ ಅಧಿಕಾರಿಗಳಿಂದ ವಿವರಣೆ ಪಡೆದು ದೆಹಲಿಗೆ ವಾಪಸ್ ತೆರಳಲಿದೆ.

ಈ ವೇಳೆ ರಾಜ್ಯಸರ್ಕಾರ ಬರಪರಿಸ್ಥಿತಿಯಿಂದಾಗಿ ರಾಜ್ಯ ಸಂಕಷ್ಟಕ್ಕೆ ಸಿಲುಕಿದ್ದು, ಬರ ಪರಿಹಾರ ಕಾಮಗಾರಿ ಕೈಗೊಳ್ಳಲು ಅನುದಾನ ನೀಡಬೇಕೆಂದು ಮನವಿ ಮಾಡಲಿದ್ದಾರೆ. ಈ ಬರ ಅಧ್ಯಯನ ತಂಡ ದೆಹಲಿಗೆ ತೆರಳಿ ಕೇಂದ್ರ ಸರ್ಕಾರಕ್ಕೆ ವರದಿ ನೀಡಿದ ಬಳಿಕ ರಾಜ್ಯದಲ್ಲಿ ಬರ ಪರಿಹಾರ ಕಾಮಗಾರಿ ಕೈಗೊಳ್ಳಲು ಅನುದಾನ ಬಿಡುಗಡೆ ಮಾಡುವ ನಿರೀಕ್ಷೆ ಇದೆ.

**ಪ್ರಮುಖ ಸುದ್ದಿ**

# ವೈಯಕ್ತಿಕ ಅನುಭವಗಳೇ ಕತೆಗೆ ಜೀವಾಳ: ಡಾ.ಮಾಳಿಗೆ

» **ಹಿರಿಯೂರು**

ಕಾಲ್ಪನಿಕತೆಗಿಂತ ವೈಯಕ್ತಿಕ ಅನುಭವಗಳೇ ಕತೆಗಳ ಜೀವಾಳವಾಗಿದೆ.

ಅನುಭವಗಳು ಮತ್ತು ತನ್ನ ಕಾಲದ ಅನುಭವ ಹದಗೊಂಡಾಗ ಮಾತ್ರ ಕಥೆಗಳು ಆಪ್ತವಾಗುತ್ತವೆ ಎಂದು ಡಾ.ಜಿ.ಕರಿಯಪ್ಪ ಮಾಳಿಗೆ ಹೇಳಿದರು.ನಗರದಲ್ಲಿ ವಿರಲೋಕ ಪ್ರಕಾಶನ, ಬುಡಕಟ್ಟು ಸಂಸ್ಕೃತಿ ಅಧ್ಯಯನ ಹಾಗೂ ಅಭಿವೃದ್ಧಿ ಸಂಸ್ಥೆ. ಹಿರಿಯೂರು ಸಾಂಸ್ಕೃತಿಕ ಸಂಸ್ಥೆ. ವಾಣಿ ಸಕ್ಕರೆ ಸರ್ಕಾರಿ ಪ್ರಥಮದರ್ಜೆಕಾಲೇಜು.ಸಹಯೋಗದಿಂದ ದೇಶಿ ಜಗಲಿ ಕಥಾ ಕಮ್ಮಟ ಸಮಾರೋಪ ಕಾರ್ಯಕ್ರಮದಲ್ಲಿ ಮಾತನಾಡಿ ಕತೆಗಳಲ್ಲಿ ಕಾಲ್ಪನಿಕತೆಗಿಂತ ತನ್ನ ಅನುಭವಗಳಿರಬೇಕು. ಇವೆರಡೂ ಸೇರಿ ಕಟ್ಟಿದ ಕತೆಗಳು ಸಾಹಿತ್ಯಿಕ ಗುಣ ಪಡೆಯುತ್ತವೆ. ಆಧುನಿಕ ಕನ್ನಡ ಸಾಹಿತ್ಯದ ಪ್ರಕಾರಗಳಲ್ಲಿ ಅತಿ ಹೆಚ್ಚು ಬರಹಗಾರರನ್ನ ಹೊಂದಿರುವ ಕಥಾ ಸಾಹಿತ್ಯ ಈ ಹೊತ್ತು ಹಿಂದೆಂದಿಗಿಂತಲೂ ಅದಮ್ಯ ಉತ್ಸಾಹದಿಂದ ಬರೆಯುವ ಕಥೆಗಾರರನ್ನ ಈ ವಲಯ ಆವರಿಸಿಕೊಂಡಿದೆ. ಹಿರಿ




ಕಿರಿಯರೆನ್ನದೆ ಎಲ್ಲಾ ವಯೋಮಾನದ ಬರಹಗಾರರ ಆಸಕ್ತಿಯ ಅಭಿವ್ಯಕ್ತಿಯಾಗಿದೆ. ಜಾಗ್ರತೀಕರಣದಿಂದಾಗುತ್ತಿರುವ ಸಾಂಸ್ಕೃತಿಕ ಪಲ್ಲಟಗಳು ಬದುಕಿನ ಆಲೋಚನಾ ಕ್ರಮವನ್ನೇ ಬದಲಿಸಿವೆ. ಆತಂಕ, ಅವಸರ, ಉದ್ವೇಗ, ಸಂಶಯಗಳು ಹೆಚ್ಚಾಗಿ ಬದುಕಿನ ನೆಮ್ಮದಿಯನ್ನು ಕಸಿದುಕೊಳ್ಳುತ್ತಿವೆ. ಮಾನವೀಯ ಮೌಲ್ಯಗಳು ಶಿಥಿಲ ಗೊಳ್ಳುತ್ತಿವೆ. ಸಮಾನತೆಯ ಆಶಯಗಳು, ಸೌಹಾರ್ದತೆಯ ನೆಲೆಗಳು ದೂರ ಸರಿಯುತ್ತಿವೆ. ಓದು ಮತ್ತು ಬರಹದ ಸುಖವನ್ನು ಕಳೆದುಕೊಳ್ಳುತ್ತಿದ್ದೇವೆ. ಅಪಮೌಲ್ಯಗೊಳ್ಳುತ್ತಿರುವ ಮೌಲ್ಯಗಳನ್ನ, ಸಾಮಾಜಿಕ ಸುಧಾರಣೆಯ ನೆಲೆಗಳನ್ನ, ಜೀವನ ಪ್ರೀತಿಯ ಆಶಯಗಳನ್ನ ಬಿನ್ನ ಬಿನ್ನ ನೆಲೆಗಳಲ್ಲಿ ಸಾಹಿತ್ಯದ ವಿವಿಧ ಅಭಿವ್ಯಕ್ತಿ ಕ್ರಮದಲ್ಲಿ ಕಟ್ಟಿಕೊಡಬೇಕಾದ ಕಾಲಘಟ್ಟ ಇದಾಗಿದೆ.

ವಿಶೇಷವಾಗಿ ಆಧುನಿಕ ಸಾಮಾಜಿಕ ಮಾಧ್ಯಮಗಳ ಬಳಕೆಯಲ್ಲಿಯೂ ಸಣ್ಣ ಕಥೆಗಳ ಪ್ರಯೋಗ ಯಶಸ್ವಿ ದಾರಿಯಲ್ಲಿ ನಿರಂತರವಾಗಿ ಸಾಗುತ್ತಿದೆ. ಸಾಹಿತ್ಯ ಮತ್ತು ಓದುಗರ ಮಧ್ಯೆ ಸೇತುವೆಯಂತೆ ಪತ್ರಿಕೆಗಳಲ್ಲಿ ಬರುತ್ತಿರುವ ಸಾಪ್ತಾಹಿಕ ಪುರವಣಿಗಳು ಓದುಗ ವಲಯವನ್ನು ಮತ್ತಷ್ಟು ವಿಸ್ತರಿಸಿವೆ. ಸಣ್ಣ ಕಥೆಗಳ ಜೀವಾಳ ತಂತ್ರ. ಅದು ವಸ್ತುವಿನಲ್ಲಿರಬಹುದು, ಶೈಲಿಯಲ್ಲಿರಬಹುದು, ಪಾತ್ರಗಳಲ್ಲಿರ ಬಹುದು. ಅಭಿವ್ಯಕ್ತಿ ಕ್ರಮದಲ್ಲಿರಬಹುದು. ಗ್ರಾಮ ಜಗತ್ತಿನಲ್ಲಾಗುತ್ತಿರುವ ಸಂಕೀರ್ಣ ಬದುಕಿನ ಸಮಸ್ಯೆ ಸವಾಲುಗಳನ್ನು ಇನ್ನಷ್ಟು ವೈವಿಧ್ಯಮಯವಾಗಿ ಅಭಿವ್ಯಕ್ತಿಯ ಹೊಸತನದೊಂದಿಗೆ ಕಟ್ಟಿಕೊಡುವ ಕೈಚಳಕ ಕಥೆಗಾರರಲ್ಲಿ ಮೂಡಲಿವಂತಾಗಲಿ.

ಇದಕ್ಕೂ ಮೊದಲು ಡಾ.ತಾರಿಣಿ ಶುಭದಾಯಿನಿ ಯವರು ಕನ್ನಡ ಕಥಾ ಜಗತ್ತು ಮತ್ತು ಮಹಿಳಾ ಕಥೆಗಾರರು, ಡಾ.ಎಚ್.ವಿಜಯಕುಮಾರ್ ಅವರು ಸಣ್ಣಕಥೆಗಳು ಮತ್ತು ಸಮಕಾಲೀನತೆ ಕುರಿತು ವಿಷಯ ಮಂಡಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನ ಕ.ಸಾ.ಪ. ಮಾಜಿ ಅಧ್ಯಕ್ಷರಾದ ಧನಂಜಯಕುಮಾರ್ ವಹಿಸಿದ್ದರು. ವೇದಿಕೆಯಲ್ಲಿ ಶಿಬಿರದ ನಿರ್ದೇಶಕರಾದ ಪ್ರೊ.ಚಿತ್ತಯ್ಯ. ಪ್ರಾಂಶುಪಾಲರಾದ ಡಾ.ಆರ್.ಮಹೇಶ್, ಡಾ.ಧರಣೇಂದ್ರಯ್ಯ, ಕೆ.ಎಂ.ಜಗನ್ನಾಥ್, ಇದ್ದರು. ಬಸವರಾಜ್ ಬೆಳಗಟ್ಟ ಕಾರ್ಯಕ್ರಮ ನಿರೂಪಿಸಿದರು. ಶಿಬಿರಾರ್ಥಿಗಳಿಗೆ ಪ್ರಮಾಣಪತ್ರ ವಿತರಿಸಲಾಯಿತು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T